www.VIKRAMAVAHINI.com
ಕನ್ನಡ ದಿನಪತ್ರಿಕೆ
PRGI NO: KARKAN/2018/78481
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ

### ಸವಿ ವಾಹಿನಿ

ಸೋತೆ ಎಂದು ನೀ ಮುಂದಿಟ್ಟ ಹೆಜ್ಜೆ ಹಿಂದಿಡಬೇಡ. ಏಕೆಂದರೆ. ಯಾರಿಗೆ ಗೊತ್ತು ಆ ಹೆಜ್ಜೆ ನಿನ್ನ ಇತಿಹಾಸವನ್ನೇ ಸೃಷ್ಟಿ ಮಾಡುವ ಹೆಜ್ಜೆಯಾಗಿರಬಹುದು.

### ದಿನ ಪಂಚಾಂಗ

ಅಕ್ಟೋಬರ್, 16–2026, ಶುಕ್ರವಾರ ಶರದ್ ಋತು,
ಆಶ್ವಯುಜ ಮಾಸ, ಶುದ್ಧ ಪಕ್ಷ
ಷಷ್ಠಿ ತಿಥಿ ರಾ.3:17
ಮೂಲ ನಕ್ಷತ್ರ ದಿನಪೂರ್ತಿ
ರಾಹುಕಾಲ ಬೆ 10:35–12:04
ಸರಸ್ವತೀ ಪೂಜೆ ಆವಾಹನ, ವಿಶ್ವ ಆಹಾರ ದಿನ, ಸೂಡಿ ಜುಕ್ತಿಮಠ ಉಮಾಪತಿ ಆರಾಧನೆ ಮತ್ತು ಜಾತ್ರೆ, ಸೂಡಿ ಶಿವಾಚಾರ್ಯ ಪುಣ್ಯದಿನ

# ರಾವಣನ ಜೊತೆ 30 ಅಡಿ ಜಿರಳೆ ದಹನ!

● ವಿಕ್ರಮ ವಾಹಿನಿ । ನವದೆಹಲಿ

ದೆಹಲಿಯ ಪಿತಾಂಪುರದಲ್ಲಿ ಈ ಬಾರಿ ನಡೆಯಲಿರುವ ರಾಮಲೀಲಾ ಉತ್ಸವದಲ್ಲಿ ರಾವಣ, ಕುಂಭಕರ್ಣ ಮತ್ತು ಮೇಘನಾದರ ಪ್ರತಿಕೃತಿಗಳ ಜತೆಗೆ 30 ಅಡಿ ಎತ್ತರದ ಬೃಹತ್ ಜಿರಳೆಯ ಪ್ರತಿಕೃತಿಯನ್ನೂ ದಹಿಸಲು ಶ್ರೀ ಕೇಶವ ರಾಮಲೀಲಾ ಸಮಿತಿ ನಿರ್ಧರಿಸಿದೆ. ಜಿರಳೆಯು ಕೊಳಕು ಮತ್ತು ಅನೈರ್ಮಲ್ಯದ ಸಂಕೇತವಾಗಿರುವುದರಿಂದ ಅದರ ಪ್ರತಿಕೃತಿ ದಹಿಸುವ ಮೂಲಕ ಸ್ವಚ್ಛತೆಯ ಮಹತ್ವದ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವುದು ಸಮಿತಿಯ ಉದ್ದೇಶವಾಗಿದೆ.

ಸಮಿತಿಯ ಅಧ್ಯಕ್ಷ ಹಾಗೂ ಬಿಜೆಪಿ ಶಾಸಕ ಅಶೋಕ್ ಗೋಯಲ್ ಈ ಕುರಿತು ಮಾತನಾಡಿ, ಜಿರಳೆಯ ಪ್ರತಿಕೃತಿ ದಹಿಸುವ ನಿರ್ಧಾರಕ್ಕೆ ಯಾವುದೇ ರಾಜಕೀಯ ಉದ್ದೇಶವಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ರಾಮಲೀಲಾದಲ್ಲಿ ಕೆಟ್ಟದ್ದರ ವಿರುದ್ಧ ಒಳ್ಳೆಯದರ ವಿಜಯವನ್ನು ಪ್ರತಿಬಿಂಬಿಸುವಂತೆ, ಜಿರಳೆಯ ಪ್ರತಿಕೃತಿ ದಹನದ ಮೂಲಕವೂ ಅನೈರ್ಮಲ್ಯದ ವಿರುದ್ಧ ಸ್ವಚ್ಛತೆಯ ಸಂದೇಶ ಸಾರಲಾಗುವುದು ಎಂದು ತಿಳಿಸಿದ್ದಾರೆ.

ರಾವಣನ ಸೈನ್ಯದಲ್ಲಿನ ರಾಕ್ಷಸರ ಪ್ರತಿಕೃತಿಗಳ ಸಾಲಿಗೆ ಈ ಬಾರಿ ಜಿರಳೆಯನ್ನೂ ಸೇರಿಸಲಾಗುತ್ತಿದೆ. ಈ ಉಪಕ್ರಮವು ಕೇಂದ್ರ



ಸರ್ಕಾರದ 'ಸ್ವಚ್ಛ ಭಾರತ' ಅಭಿಯಾನ ಮತ್ತು ದೆಹಲಿಯ 'ಸ್ವಚ್ಛ ದೆಹಲಿ' ಅಭಿಯಾನಕ್ಕೆ ಪೂರಕವಾಗಿರಲಿದೆ ಎಂದು ಸಮಿತಿ ಹೇಳಿದೆ. ಸಾಮಾನ್ಯವಾಗಿ ರಾವಣ, ಕುಂಭಕರ್ಣ ಮತ್ತು ಮೇಘನಾದರ ಪ್ರತಿಕೃತಿಗಳನ್ನು ದಹಿಸುವ ಮೂಲಕ ಕೆಟ್ಟದ್ದರ ಮೇಲೆ ಒಳ್ಳೆಯದರ ವಿಜಯವನ್ನು ಸಾರಲಾಗುತ್ತದೆ. ಈ ಬಾರಿ ಸ್ವಚ್ಛತೆಯ ಸಂದೇಶವನ್ನೂ ಉತ್ಸವದೊಂದಿಗೆ ಬೆಸೆಯಲು ಸಮಿತಿ ಮುಂದಾಗಿದೆ.

ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ರಾಜೀನಾಮೆಗೆ ಒತ್ತಾಯಿಸಿ 'ಕಾಕ್ರೋಚ್ ಜನತಾ ಪಕ್ಷ' (ಸಿಜೆಪಿ) ದೆಹಲಿಯಲ್ಲಿ ಪ್ರತಿಭಟನೆ ನಡೆಸುತ್ತಿರುವ ಸಂದರ್ಭದಲ್ಲೇ ಜಿರಳೆ ಪ್ರತಿಕೃತಿ ದಹಿಸುವ ನಿರ್ಧಾರ ಪ್ರಕಟವಾಗಿದೆ. ಇದರಿಂದ ಈ ಕ್ರಮ ರಾಜಕೀಯ ಚರ್ಚೆಗೂ ಕಾರಣವಾಗಿದೆ. ಆದರೆ, ಪ್ರತಿಕೃತಿ ದಹನದ ಹಿಂದೆ ರಾಜಕೀಯ ಉದ್ದೇಶವಿದೆ ಎಂಬುದನ್ನು ಅಶೋಕ್ ಗೋಯಲ್ ನಿರಾಕರಿಸಿದ್ದಾರೆ. ಒಟ್ಟಿನಲ್ಲಿ, ಈ ಬಾರಿಯ ರಾಮಲೀಲಾ ಉತ್ಸವದಲ್ಲಿ ಸಾಂಪ್ರದಾಯಿಕವಾಗಿ ನಡೆಯುವ ರಾವಣ ದಹನದ ಜತೆಗೆ ಜಿರಳೆ ಪ್ರತಿಕೃತಿ ದಹನವೂ ವಿಶೇಷ ಆಕರ್ಷಣೆಯಾಗುವ ನಿರೀಕ್ಷೆಯಿದೆ. ಇದರ ಮೂಲಕ ಸ್ವಚ್ಛತೆ ಮತ್ತು ನೈರ್ಮಲ್ಯದ ಕುರಿತು ಜನರಿಗೆ ಸಂದೇಶ ನೀಡಲು ಆಯೋಜಕರು ಉದ್ದೇಶಿಸಿದ್ದಾರೆ.

### ಆಧ್ಯಾತ್ಮ

## 'ಪಾಪ-ಪುಣ್ಯಗಳು ದೇಹದಲ್ಲಿ 'ಕೋಡಿಂಗ್'ನಂತೆ ದಾಖಲಾಗುತ್ತವೆ'



● ವಿಕ್ರಮ ವಾಹಿನಿ । ಬೆಂಗಳೂರು

ನಾವು ಏನನ್ನು ಮಾಡುತ್ತೇವೋ ಅದು ನಮಗೆ ತಿರುಗಿ ಬರುತ್ತದೆ. ನಾವು ಯಾವುದೇ ಜೀವಿಯನ್ನು ಹಿಂಸಿಸಿದರೆ, ಆ ಹಿಂಸೆಯ ಚಿಹ್ನೆ ನಮ್ಮಲ್ಲಿ ಮೂಡುತ್ತದೆ. ಅದರಿಂದಾಗಿ ನಾವು ಆ ಪಾಪದ ಫಲವನ್ನು ಅನುಭವಿಸಲೇ ಬೇಕಾಗುತ್ತದೆ ಎಂದು ಶ್ರೀರಾಮಚಂದ್ರಾಪುರ ಮಠದ ಜಗದ್ಗುರು ಶಂಕರಾಚಾರ್ಯ ಶ್ರೀಶ್ರೀ ರಾಘವೇಶ್ವರ ಭಾರತೀ ಮಹಾಸ್ವಾಮಿಗಳು ಹೇಳಿದರು.

ಬೆಂಗಳೂರಿನ ಗಿರಿನಗರದಲ್ಲಿರುವ ಶ್ರೀರಾಮಚಂದ್ರಾಪುರ ಮಠದ ಶಾಖೆಯಲ್ಲಿ ನಡೆಯುತ್ತಿರುವ 'ನವರಾತ್ರ ನಮಸ್ಯಾ' ಕಾರ್ಯಕ್ರಮದಲ್ಲಿ 15/10/2026 ರಂದು ಲಲಿತೋಪಾಖ್ಯಾನ ಪ್ರವಚನವನ್ನು ಅನುಗ್ರಹಿಸಿದ ಶ್ರೀಗಳು,

ಇಂದ್ರ ಹಾಗೂ ದೇವಗುರು ಬೃಹಸ್ಪತಿಯ ಸಂವಾದದ ಕಥಾನಕದಲ್ಲಿ ಕರ್ಮ ಸಿದ್ಧಾಂತವನ್ನು ಪ್ರಸ್ತಾಪಿಸಿ, ನಾವು ಮಾಡಿದ ಪಾಪ ಹಾಗೂ ಪುಣ್ಯಗಳೇ ನಮಗೆ ಮರಳಿ ಬರುತ್ತದೆ. ಪಾಪ ಪುಣ್ಯಗಳಿಗೆ ಅನುಗುಣವಾಗಿ ನಮ್ಮ ದೇಹದಲ್ಲಿ ಗುರುತು ಮೂಡುತ್ತದೆ. ಅದನ್ನು ಆಧರಿಸಿ ವಿಧಿಯು ಫಲಾಪಲಗಳನ್ನು ನೀಡುತ್ತದೆ. ಈ ಕಾರ್ಯದಲ್ಲಿ ಕ್ರೀಡೆಗಳಲ್ಲಿ ನಿರ್ಣಾಯಕರಿಗಿರುವ ಪಾತ್ರ ಮಾತ್ರ ದೇವರದ್ದಾಗಿರುತ್ತದೆ ಎಂದು ಹೇಳಿದರು.

ಇಂದಿನ ತಂತ್ರಜ್ಞರು ಕಪ್ಪು ಪರದೆಯ ಮೇಲೆ ಬರೆಯುವ ಅಂಜುಟಿರ ಜನಸಾಮಾನ್ಯರಿಗೆ ಅರ್ಥವಾಗುವಂತದ್ದಲ್ಲ. ಅದನ್ನು ಆ ತಂತ್ರಜ್ಞರು ಮಾತ್ರ ಬಲ್ಲವರಾಗಿದ್ದಾರೆ. ಹಾಗೆಯೇ ಪಾಪಗಳಿಗೂ ಕೂಡ ನಮ್ಮ ದೇಹದಲ್ಲಿ ಆ ಪಾಪಕ್ಕೆ ಸಂಬಂಧಿಸಿದ ಚಿಹ್ನೆ ಮೂಡುತ್ತದೆ. ಅದು ನಮ್ಮ ಕಣ್ಣಿಗೆ ಕಾಣುವಂತದ್ದಲ್ಲ. ಜೀವನ ಯಾತ್ರೆಯನ್ನು ಮುಗಿಸಿ ಚಿತ್ರಗುಪ್ತನ ಮುಂದೆ ನಿಂತಾಗ ಆ ಚಿಹ್ನೆಗಳನ್ನು ನೋಡಿ, ನಮ್ಮ ಪಾಪದ ಫಲವನ್ನು ನಿರ್ಧರಿಸುತ್ತಾನೆ. ಅದಕ್ಕೂ ಮೊದಲೆ ಪ್ರಾಯಶ್ಚಿತ್ತದ ಮೂಲಕ ನಮ್ಮ ಪಾಪಗಳನ್ನು ತೊಳೆದುಕೊಳ್ಳಬಹುದು ಎಂದು ಅಭಿಪ್ರಾಯಪಟ್ಟರು.

ಚಾಕುವಿನಿಂದ ಕೊಲೆಗಾರನು ಜೀವವನ್ನು ತೆಗೆದರೆ, ವೈದ್ಯನು ಶಸ್ತ್ರಚಿಕಿತ್ಸೆಯ ಮೂಲಕ ದೇಹಕ್ಕೆ ಪುನರ್ಜನ್ಮ ನೀಡುತ್ತಾನೆ. ಇಬ್ಬರೂ ಕೂಡ ಚಾಕುವನ್ನೇ ಬಳಸಿ ದೇಹವನ್ನು ತುಂಡರಿಸಿದ್ದರೂ, ಇಬ್ಬರ ಉದ್ದೇಶಗಳು ಬೇರೆ ಬೇರೆ. ಕೊಲೆಗಾರನ ಕಾರ್ಯ ಪಾಪವಾದರೆ, ವೈದ್ಯನ ಕಾರ್ಯ ಪುಣ್ಯಮಯ. ಪುಣ್ಯವೆಂಬ ದೊಡ್ಡ ಹಣವನ್ನು ತೆತ್ತು ನಾವು ಈ ಮನುಷ್ಯ ದೇಹವನ್ನು ಪಡೆದುಕೊಂಡಿದ್ದೇವೆ. ಅದನ್ನು ಸದುಪಯೋಗ ಪಡಿಸಿಕೊಳ್ಳಬೇಕಾದ ಜವಾಬ್ದಾರಿ ನಮ್ಮ ಮೇಲಿದೆ.ಧರ್ಮಶಾಸ್ತ್ರ ಸೂಚಿಸುವ ಪ್ರಾಯಶ್ಚಿತ್ತ ಮಾರ್ಗಗಳು ನಮಗೆ ತಿಳಿಯದೇ ಇದ್ದರೆ, ತುಂಬು ಮನಸ್ಸಿನಿಂದ ಜಗಜ್ಜನನಿಯನ್ನು ಭಾವಿಸಿದರೂ ಸಾಕು. ಅದು ಎಲ್ಲಾ ಪ್ರಾಯಶ್ಚಿತ್ತದ ಕಾರ್ಯಗಳನ್ನೂ ಮಾಡುತ್ತದೆ ಎಂದರು.

ಅನ್ನಬ್ರಹ್ಮ ಸಂಕೀರ್ತನಮ್: ಊಟದ ಸಮಯದಲ್ಲಿ ಭಗವಂತನ ಸ್ಮರಣೆಯನ್ನು ಮಾಡುತ್ತಾ, ಊಟವನ್ನು ಭಗವಂತನ ಪೂಜೆಯಾಗಿಸುವ ವಿಶಿಷ್ಟ ಕಾರ್ಯಕ್ರಮ 'ಅನ್ನಬ್ರಹ್ಮ ಸಂಕೀರ್ತನ'ವಾಗಿದ್ದು, ಜನರು ಊಟವನ್ನು ಮಾಡುವಾಗ ಅನ್ನಪೂರ್ಣೇಶ್ವರಿಯ ಮುಂದೆ ಖ್ಯಾತ ಕಲಾವಿದರು ಭಕ್ತಿಸುಧೆಯನ್ನು ಹರಿಸಿದ ವಿಭಿನ್ನ ಪ್ರಯತ್ನ ಜನರ ಮೆಚ್ಚುಗೆಗೆ ಪಾತ್ರವಾಯಿತು.

ಸಿಎ. ರವೀಂದ್ರ ಭಟ್ ಟಿ.ಎಲ್, ಸಿಎ. ಗಣಪತಿ ಶೆಟ್ಟಿಸರ, ಮಂಜುನಾಥ ಹೆಗಡೆ ದಂಪತಿಗಳು ಸೇರಿದಂತೆ ಸಾವಿರಾರು ಭಕ್ತರು ಭಾಗಿಗಳಾದರು. ಶ್ರೀಲಕ್ಷ್ಮೀ ಮಂತ್ರ ಹವನ, ದುರ್ಗಾಸಪ್ತಶತಿ ಪಾರಾಯಣ, ರಾಜರಾಜೇಶ್ವರೀ ಪೂಜೆಗಳು ನಡೆದವು.

## ಸಿಹಿ ತಿಂಡಿ ಮಳಿಗೆಗಳ ಮೇಲೆ ದಾಳಿ: 125 ಮಾದರಿ ಸಂಗ್ರಹ, 10 ಘಟಕಗಳಿಗೆ ನೋಟಿಸ್

1ನೇ ಪುಟದಿಂದ

ತಪಾಸಣೆ ವೇಳೆ ಕೆಲವು ಘಟಕಗಳಲ್ಲಿ ಆಹಾರ ತಯಾರಿಕೆ ಮತ್ತು ಸಂಗ್ರಹಣಾ ಪ್ರದೇಶಗಳನ್ನು ಅನೈರ್ಮಲ್ಯಕರವಾಗಿ ನಿರ್ವಹಿಸುತ್ತಿರುವುದು, ಸಿಬ್ಬಂದಿ ವೈದ್ಯಕೀಯ ಪ್ರಮಾಣಪತ್ರ ಹೊಂದಿರದಿರುವುದು ಹಾಗೂ ಭಾರತೀಯ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರದ (ಎಫ್‌ಎಸ್‌ಎಸ್‌ಎಐ) ಪರವಾನಗಿ ಅಥವಾ ನೋಂದಣಿ ಪಡೆಯದಿರುವುದು ಪತ್ತೆಯಾಗಿದೆ.

ನಿಯಮ ಉಲ್ಲಂಘಿಸಿದವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು. ಸಿಹಿ ತಿಂಡಿ ತಯಾರಿಕಾ ಮತ್ತು ಮಾರಾಟ ಮಳಿಗೆಗಳ ಮೇಲೆ ನಿರಂತರ ತಪಾಸಣೆ ನಡೆಸಲಾಗುವುದು ಎಂದು ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆಯ ಆಯುಕ್ತರು ಎಚ್ಚರಿಕೆ ನೀಡಿದ್ದಾರೆ.

## ಮಳೆಯಿಂದ ನೀರು ನಿಲ್ಲದಂತೆ ಪಾಲಿಕೆ ಸಿಬ್ಬಂದಿಯಿಂದ ತ್ಯಾಜ್ಯ ತೆರವು

● ವಿಕ್ರಮ ವಾಹಿನಿ । ಬೆಂಗಳೂರು

ನಗರದಲ್ಲಿ ಗುರುವಾರ ಸಂಜೆ ಸುರಿದ ಮಳೆಯ ಹಿನ್ನೆಲೆಯಲ್ಲಿ ಬೆಂಗಳೂರು ಕೇಂದ್ರ ನಗರ ಪಾಲಿಕೆಯ ಸಿಬ್ಬಂದಿ ವಿವಿಧೆಡೆ ನೀರು ಸರಾಗವಾಗಿ ಹರಿಯಲು ಶೋಲ್ಡರ್ ಡ್ರೈನ್‌ಗಳಲ್ಲಿನ ಪ್ಲಾಸ್ಟಿಕ್ ಹಾಗೂ ಇತರ ತ್ಯಾಜ್ಯವನ್ನು ತೆರವುಗೊಳಿಸುವ ಕಾರ್ಯ ಕೈಗೊಂಡರು.

ನಗರದ ವಿವಿಧ ವಿಭಾಗಗಳಲ್ಲಿ ಸ್ಥಾಪಿಸಿರುವ ನಿಯಂತ್ರಣ ಕೊಠಡಿಗಳ ಸಿಬ್ಬಂದಿ ನೀರು ನಿಂತ ಸ್ಥಳಗಳಿಗೆ ಭೇಟಿ ನೀಡಿ, ರಸ್ತೆ ಬದಿಯ ಚರಂಡಿಗಳಲ್ಲಿ ಸಂಗ್ರಹವಾಗಿದ್ದ ತ್ಯಾಜ್ಯವನ್ನು ತೆರವುಗೊಳಿಸಿದರು. ಟೌನ್‌ಹಾಲ್ ಮುಂಭಾಗ, ಅಶೋಕ ಪಿಲ್ಲರ್, ಆಚಾರ್ಯ ಲೇಔಟ್, ಎಂ.ಜಿ. ರಸ್ತೆ, ಶಾಂತಿನಗರದ ಹಲವು ಸ್ಥಳಗಳು ಹಾಗೂ ಕಮಿಷರಿಯೇಟ್ ರಸ್ತೆಯಲ್ಲಿ ಕಾರ್ಯಾಚರಣೆ ನಡೆಸಲಾಯಿತು.



ಮಳೆಯಿಂದ ಉಂಟಾಗುವ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸಿ, ಸಾರ್ವಜನಿಕರಿಗೆ ತೊಂದರೆಯಾಗದಂತೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಪಾಲಿಕೆ ಆಯುಕ್ತ ಜಗದೀಶ್ ಜಿ. ಅವರು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

## ಬಾಂಗ್ಲಾದೇಶದ ಚಳವಳಿ ಉಲ್ಲೇಖ: ನೇಹಾ ಬೋರಾ ವಿರುದ್ಧ ಬಿಜೆಪಿಯ ಆಕ್ರೋಶ

1ನೇ ಪುಟದಿಂದ

ಧಾರ್ಮಿಕ ಮೂಲಭೂತವಾದದ ವಿರುದ್ಧ ಬಾಂಗ್ಲಾದೇಶದ ಯುವಕರು ನಡೆಸಿದ ಹೋರಾಟದಿಂದಲೂ ಪ್ರೇರಣೆ ಪಡೆದಿರುವುದಾಗಿ ವಿಡಿಯೊದಲ್ಲಿ ಉಲ್ಲೇಖಿಸಲಾಗಿದೆ.

ಈ ಹೇಳಿಕೆಯನ್ನು ಮುಂದಿಟ್ಟುಕೊಂಡು ಬಿಜೆಪಿ ನಾಯಕರು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ವಿರುದ್ಧವೂ ವಾಗ್ದಾಳಿ ನಡೆಸಿದ್ದಾರೆ. ದೇಶದಲ್ಲಿ ಅಶಾಂತಿ ಸೃಷ್ಟಿಸುವ ಅಪಾಯಕಾರಿ ಉದ್ದೇಶಗಳಿಗೆ ಇಂತಹ ಹೇಳಿಕೆಗಳು ಪ್ರೇರಣೆ ನೀಡುತ್ತವೆ ಎಂದು ಬಿಜೆಪಿ ಆರೋಪಿಸಿದೆ.

ಬಾಂಗ್ಲಾದೇಶದಲ್ಲಿ ಯುವಜನರ ಪ್ರತಿಭಟನೆಗಳು ವ್ಯಾಪಕ ಹಿಂಸಾಚಾರಕ್ಕೆ ತಿರುಗಿದ್ದ ಹಿನ್ನೆಲೆಯಲ್ಲಿ, ಆ ಚಳವಳಿಯನ್ನು ಭಾರತದಲ್ಲಿ ಅನುಸರಿಸುವ ಕುರಿತು ವ್ಯಕ್ತವಾಗಿರುವ ಹೇಳಿಕೆ ರಾಜಕೀಯ ಚರ್ಚೆಗೆ ಗ್ರಾಸವಾಗಿದೆ. ಆದರೆ, ವೈರಲ್ ವಿಡಿಯೊದ ಸಂಪೂರ್ಣ ಸಂದರ್ಭ ಮತ್ತು ಹೇಳಿಕೆಯ ಹಿನ್ನೆಲೆಯನ್ನು ಸ್ವತಂತ್ರವಾಗಿ ದೃಢಪಡಿಸಬೇಕಿದೆ.

ಹಬ್ಬದ ಸಂದರ್ಭದಲ್ಲಿ ಸಿಹಿ ತಿಂಡಿಗಳಿಗೆ ಬೇಡಿಕೆ ಹೆಚ್ಚಾಗುವುದರಿಂದ ಅವುಗಳ ತಯಾರಿಕೆಯಲ್ಲಿ ಸ್ವಚ್ಛತೆ ಕಾಪಾಡುವುದು, ಗುಣಮಟ್ಟದ ಕಚ್ಚಾ ವಸ್ತುಗಳನ್ನು ಬಳಸುವುದು ಮತ್ತು ಆಹಾರ ಸುರಕ್ಷತಾ ನಿಯಮಗಳನ್ನು ಪಾಲಿಸುವುದು ಕಡ್ಡಾಯವಾಗಿದೆ. ಗ್ರಾಹಕರ ಆರೋಗ್ಯದ ದೃಷ್ಟಿಯಿಂದ ಮಳಿಗೆಗಳು ಹಾಗೂ ತಯಾರಿಕಾ ಘಟಕಗಳ ಮೇಲೆ ನಿಗಾ ವಹಿಸಲಾಗಿದೆ ಎಂದು ಇಲಾಖೆ ತಿಳಿಸಿದೆ.

ಸಿಹಿ ತಿಂಡಿಗಳಲ್ಲಿ ಬಳಸುವ ಬಣ್ಣ, ಸಿಹಿಕಾರಕ ಹಾಗೂ ಇತರ ಪದಾರ್ಥಗಳು ನಿಗದಿತ ಮಾನದಂಡಗಳಿಗೆ ಅನುಗುಣವಾಗಿವೆಯೇ ಎಂಬುದನ್ನು ಪ್ರಯೋಗಾಲಯದ ಪರೀಕ್ಷೆಗಳ ಮೂಲಕ ಪರಿಶೀಲಿಸಲಾಗುತ್ತದೆ. ಮಾದರಿಗಳಲ್ಲಿ ಗುಣಮಟ್ಟದ ಲೋಪ ಅಥವಾ ಸುರಕ್ಷತಾ ನಿಯಮಗಳ ಉಲ್ಲಂಘನೆ ದೃಢಪಟ್ಟರೆ ಸಂಬಂಧಪಟ್ಟವರ ವಿರುದ್ಧ ಕಾನೂನುಬದ್ಧ ಕ್ರಮ ಕೈಗೊಳ್ಳಲಾಗುತ್ತದೆ.



ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ರಾಜ್ಯದ ನೂತನ ರಾಜ್ಯಪಾಲೆ ಸುಧಾ ಯಾದವ್ ಅವರನ್ನು ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಅವರೊಂದಿಗೆ ಸಮಾಜ ಕಲ್ಯಾಣ ಸಚಿವ ಕೆ.ಎಚ್. ಮುನಿಯಪ್ಪ ಆತ್ಮೀಯವಾಗಿ ಸ್ವಾಗತಿಸಿದರು.

## ಮಳೆ ಕೊರತೆ: ಅಂತರ್ಜಲ ಕುಸಿತದ ಆತಂಕ

● ವಿಕ್ರಮ ವಾಹಿನಿ । ಹಾಸನ

ರಾಜ್ಯದಲ್ಲಿ ಮಳೆ ಕೊರತೆ ಹಾಗೂ ಹೆಚ್ಚುತ್ತಿರುವ ತಾಪಮಾನದಿಂದ ಅಂತರ್ಜಲ ಮಟ್ಟ ಕುಸಿಯುವ ಆತಂಕ ಎದುರಾಗಿದೆ. ಎಲ್ ನಿನೋ ಪರಿಣಾಮದಿಂದ ಮಳೆಯ ಮಾದರಿಯಲ್ಲಿ ವ್ಯತ್ಯಾಸವಾಗುವ ಸಾಧ್ಯತೆಯಿರುವುದರಿಂದ ಕುಡಿಯುವ ನೀರು, ಕೃಷಿ ಮತ್ತು ವಿದ್ಯುತ್ ಪೂರೈಕೆಗೆ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಬೇಕು ಎಂದು ಕರ್ನಾಟಕ ರಾಜ್ಯ ಹವಾಮಾನ ರಾಯಭಾರಿ ಉಪೇಂದ್ರ ತ್ರಿಪಾಠಿ ಸಲಹೆ ನೀಡಿದ್ದಾರೆ.

ಮಳೆನೀರು ಕೊಯ್ಲು, ಕೆರೆಗಳ ಪುನಶ್ಚೇತನ, ಅಂತರ್ಜಲ ಮರುಪೂರಣ ಹಾಗೂ ನೀರಿನ ಮಿತಬಳಕೆಗೆ ಆದ್ಯತೆ ನೀಡಬೇಕು. ಬಳಕೆಯಾದ ನೀರನ್ನು ಸಂಸ್ಕರಿಸಿ ಮರುಬಳಕೆ ಮಾಡುವ ಮೂಲಕ ಕುಡಿಯುವ ನೀರಿನ ಮೇಲಿನ ಒತ್ತಡ ಕಡಿಮೆ ಮಾಡಬಹುದು ಎಂದು ಅವರು ತಿಳಿಸಿದ್ದಾರೆ.

ಮಳೆಯ ಪ್ರಮಾಣಕ್ಕೆ ಅನುಗುಣವಾಗಿ ಬೆಳೆ ಆಯ್ಕೆ ಮಾಡುವುದು ಹಾಗೂ ಮಣ್ಣಿನ ತೇವಾಂಶ ಕಾಪಾಡಿಕೊಳ್ಳುವುದು ರೈತರಿಗೆ ಅಗತ್ಯವಾಗಿದೆ.

ಜಿಲ್ಲಾಡಳಿತ, ಸಂಬಂಧಪಟ್ಟ ಇಲಾಖೆಗಳು ಮತ್ತು ಸಾರ್ವಜನಿಕರು ಸಮನ್ವಯದಿಂದ ಕಾರ್ಯನಿರ್ವಹಿಸಿ ನೀರಿನ ಸಂರಕ್ಷಣೆಗೆ ಮುಂದಾಗಬೇಕು ಎಂದು ಅವರು ಕರೆ ನೀಡಿದ್ದಾರೆ.

## ಐವರು ಕಾನೂನು ಪಂಡಿತರಿಗೆ ವಕೀಲಭೂಷಣ ಪ್ರಶಸ್ತಿ ಪ್ರದಾನ

● ವಿಕ್ರಮ ವಾಹಿನಿ । ಬೆಂಗಳೂರು

ಕನ್ನಡ–ಇಂಗ್ಲೀಷ್ ನಲ್ಲಿ ಪ್ರಕಟಗೊಳ್ಳುವ ವಕೀಲರ ವಾಹಿನಿ ಮಾಸ ಪತ್ರಿಕೆಯಿಂದ ಇಂದು ಅ.15 ರಂದು ಕಾನೂನು ಕ್ಷೇತ್ರದಲ್ಲಿ ಅದ್ವಿತೀಯವಾದ ಸಾಧನೆ ಮಾಡಿದ ಐವರು ಮಹಾನ್ ಸಾಧಕರಿಗೆ ವಕೀಲ ಭೂಷಣ ಪ್ರಶಸ್ತಿ ನೀಡಲಾಯಿತು

ಇಲ್ಲಿನ ಹೈಕೋರ್ಟ್ ಆವರಣದಲ್ಲಿರುವ ಪ್ಯಾಟ್ರನ್ ಇನ್ ಚೀಫ್ ಹಾಲ್ ನಲ್ಲಿ ಸಂಜೆ 5 ಗಂಟೆಗೆ ನಡೆದ ಸಮಾರಂಭದ ವೇಳೆ ಹೊರಗಡೆ ಜೋರು ಮಳೆ, ತಂಪಾದ ವಾತಾವರಣದಲ್ಲಿ ಭಾರತೀಯ ಕಾನೂನು ಶಾಸ್ತ್ರದಲ್ಲಿ ಗಣನೀಯವಾಗಿ ಸೇವೆ ಸಲ್ಲಿಸಿದ ಬೆಂಗಳೂರಿನ ಮಹನೀಯರಾದ ಬಿ.ಸಿ.ಪ್ರಭಾಕರ್, ಆರ್.ಬಿ.ಸದಾಶಿವಪ್ಪ, ಕುಂದಾಪುರದ ಎ.ಎಸ್.ಎನ್.ಹೆಬ್ಬಾರ್, ಮಂಗಳೂರಿನ ಎಂ.ವಿ.ಶಂಕರ್ ಭಟ್ ಮತ್ತು ಶಿವಮೊಗ್ಗದ ಕೆ.ಬಸಪ್ಪ ಗೌಡ ಇವರನ್ನು ಗೌರವಪೂರ್ವಕವಾಗಿ ಸನ್ಮಾನಿಸಲಾಯಿತು.

ಹೈಕೋರ್ಟ್ ಮುಖ್ಯ ನ್ಯಾಯಾಧೀಶರಾದ ಜಸ್ಟೀಸ್ ವಿಭು ಬಕ್ರು ಅವರು ಸಮಾರಂಭವನ್ನು ಉದ್ಘಾಟಿಸಿ, ಐವರು ಮಹಾನ್ ಸಾಧಕರನ್ನು ಗುರುತಿಸಿ ಸನ್ಮಾನಿಸಿದ್ದು ಕಾನೂನು ಕ್ಷೇತ್ರಕ್ಕೆ ಹೆಚ್ಚಿನ ಮೆರುಗು ನೀಡಿದೆ ಎಂದರು.




ಮುಖ್ಯ ಅತಿಥಿಗಳಾಗಿ ಹೈಕೋರ್ಟ್ ನ್ಯಾಯಾಧೀಶರಾದ ಜಸ್ಟೀಸ್ ಸೂರಜ್ ಗೋವಿಂದರಾಜ್, ಜಸ್ಟೀಸ್ ಕೆ.ಎಸ್.ಹೇಮಲತಾ ಪಾಲ್ಗೊಂಡಿದ್ದರು. ಕರ್ನಾಟಕ ಅಡ್ವೋಕೇಟ್ ಜನರಲ್, ಹಿರಿಯ ವಕೀಲರಾದ ಶಶಿಕಿರಣ್ ಶೆಟ್ಟಿ ಅವರು ವಕೀಲರ ವಾಹಿನಿ ಬಿಡುಗಡೆ ಮಾಡಿದರು. ಕರ್ನಾಟಕ ಉಚ್ಚ ನ್ಯಾಯಾಲಯದ ಹೆಚ್ಚುವರಿ ಸಾಲಿಸಿಟರ್ ಜನರಲ್ ಕೆ.ಅರವಿಂದ್ ಕಾಮತ್ ಅವರು ಗೌರವ ಉಪಸ್ಥಿತಿ ವಹಿಸಿದ್ದರು. ಭಾರತೀಯ ವಿದ್ಯಾಭವನದ ಅಧ್ಯಕ್ಷರು, ಲೇಖಕರು, ಹಿರಿಯ ವಕೀಲರಾದ ಕೆ.ಜಿ.ರಾಘವನ್ ಅವರು ಪೀಠಿಕಾರೂಪದ ಮಾತುಗಳನ್ನಾಡಿ ಶುಭ ಕೋರಿದರು. ಹಿರಿಯ ವಕೀಲರು, ಮಾಜಿ ಅಡ್ವೋಕೇಟ್ ಜನರಲ್ ಆಗಿರುವ ಉದಯ್ ಹೊಳ್ಳ ಅವರು ಅಧ್ಯಕ್ಷತೆ ವಹಿಸಿದ್ದರು.

ಮುಖ್ಯಸಂಪಾದಕರಾದ ಎಸ್. ಎನ್. ಪ್ರಶಾಂತ್ ಚಂದ್ರ, ಸಂಪಾದಕರು ಮತ್ತು ಪ್ರಕಾಶಕರಾದ ಡಾ.ಡಿ.ಎಂ.ಹೆಗಡೆ, ಸಹ ಸಂಪಾದಕರಾದ ಅರವಿಂದ್ ಎಂ.ನೆಗಳೂರು, ಉಪ ಸಂಪಾದಕರಾದ ವೀರಬಸಪ್ಪ ಕೆ. ಚಂದ್ರಕಾಂತ್ ಪಾಟೀಲ್. ಕೆ., ವೆಂಕಟೇಶ್. ಮೇಗರವಳ್ಳಿ ಅವರು ಉಪಸ್ಥಿತಿ ವಹಿಸಿದ್ದರು.





ಸಿಎಂ ಡಿ.ಕೆ. ಶಿವಕುಮಾರ್ ಅವರು ಉಡುಪಿ ಜಿಲ್ಲೆ ಕಾಪುವಿನ ಉಚ್ಚಿಲದ ಮಹಾಲಕ್ಷ್ಮಿ ದೇವಸ್ಥಾನದಲ್ಲಿ ಗುರುವಾರ ಪೂಜೆ ಸಲ್ಲಿಸಿದರು. ನಂತರ ಶಾರದ ಮಾತೆ ಪ್ರತಿಮೆಗೆ ಪೂಜೆ ಸಲ್ಲಿಸಿದರು ಹಾಗೂ ಮೊಗವೀರ ಸಮಾಜದ ಕುಲಗುರು ಕೀರ್ತಿಶೇಷ ಮಾಧವ ಮಂಗಲ ಪೂಜ್ಯರ ಪ್ರತಿಮೆಗೆ ಪುಷ್ಪಾರ್ಚನೆ ಮಾಡಿದರು. ದೇವಾಲಯದ ವಸ್ತುಪ್ರದರ್ಶನ ಆವರಣದಲ್ಲಿ ವಿವಿಧ ಧಾನ್ಯಗಳಂದ ರಚಿಸಿದ ತಮ್ಮದೇ ಕಲಾಕೃತಿಯನ್ನು ಅನಾವರಣಗೊಳಿಸಿದರು. ಸಚಿವರಾದ ಯು.ಟಿ. ಖಾದರ್, ರಿಜ್ವಾನ್ ಅರ್ಷದ್, ಸಂಸದ ಕೋಟ ಶ್ರೀನಿವಾಸ್ ಪೂಜಾರಿ, ಶಾಸಕರಾದ ಮಂಕಾಳ್ ವೈದ್ಯ, ಯಶಪಾಲ್ ಸುವರ್ಣ, ಸುರೇಶ್ ಶೆಟ್ಟಿ ಗುರ್ಮೆ, ಪರಿಷತ್ ಸದಸ್ಯರಾದ ಮಂಜುನಾಥ ಭಂಡಾರಿ, ಐವಾನ್ ಡಿಸೋಜಾ, ಕೆಪಿಸಿಸಿ ಪ್ರಚಾರ ಸಮಿತಿ ಅಧ್ಯಕ್ಷ ವಿನಯ್ ಕುಮಾರ್ ಸೊರಕೆ, ಕರಾವಳಿ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಎಂ ಎ ಗಫೂರ್, ಮಾಜಿ ಶಾಸಕ ಲಾಲಾಜಿ ಮೆಂಡನ್, ಗೋಪಾಲ್ ಪೂಜಾರಿ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಕಿಶನ್ ಹೆಗ್ಡೆ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ‘ಪ್ರಿಯಾಂಕ್ ಖರ್ಗೆ ನನ್ನ ಸಾವು ಬಯಸುತ್ತಿದ್ದಾರೆ’




● ವಿಕ್ರಮ ವಾಹಿನಿ । ಬೆಂಗಳೂರು

“ನನಗೆ ನಾಲ್ಕನೇ ಬಾರಿ ಹೃದಯಾಘಾತವಾಗಿ, ಓಪನ್ ಹಾರ್ಟ್ ಸರ್ಜರಿ ಆಗಲಿ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಬಯಸುತ್ತಿದ್ದಾರೆ. ಆದರೆ ನನ್ನನ್ನು ಕಾಪಾಡಲು ಭಗವಂತನಿದ್ದಾನೆ” ಎಂದು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಆಕ್ರೋಶ ವ್ಯಕ್ತಪಡಿಸಿದರು.

ಬೆಂಗಳೂರು ಪೊಲೀಸ್ ಆಯುಕ್ತರ ಕಚೇರಿ ಬಳಿ ಗುರುವಾರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ತಮ್ಮ ಆರೋಗ್ಯದ ಕುರಿತು ಪ್ರಿಯಾಂಕ್ ಖರ್ಗೆ ನೀಡಿರುವ ಹೇಳಿಕೆಗೆ ತೀವ್ರ ಆಕ್ಷೇಪ ವ್ಯಕ್ತಪಡಿಸಿದರು. ಈಗಾಗಲೇ ಮೂರು ಬಾರಿ ಹೃದಯ ಶಸ್ತ್ರಚಿಕಿತ್ಸೆಗೆ ಒಳಗಾಗಿರುವ ತಮ್ಮ ಬಗ್ಗೆ ಇಂತಹ ಹೇಳಿಕೆ ನೀಡುವುದು ಸರಿಯಲ್ಲ ಎಂದು ಕಿಡಿಕಾರಿದರು.

ತಮ್ಮನ್ನು ತನಿಖೆಗೆ ಒಳಪಡಿಸುವುದಾಗಿ ಗೃಹ ಸಚಿವರು ನೀಡಿರುವ ಹೇಳಿಕೆಗೆ ಪ್ರತಿಕ್ರಿಯಿಸಿದ ಕುಮಾರಸ್ವಾಮಿ, “ಅವರ ಉದ್ಧಟತನ ಮತ್ತು ಅಧಿಕಾರದ ಮದವನ್ನು ಇಳಿಸುವುದು ಹೇಗೆಂಬುದು ನನಗೆ ಗೊತ್ತಿದೆ. ಗೃಹ ಸಚಿವರ ಅಧಿಕಾರದ ಮದಕ್ಕೆ ತಕ್ಕ ಉತ್ತರ ನೀಡುತ್ತೇನೆ” ಎಂದು ಎಚ್ಚರಿಕೆ ನೀಡಿದರು.

**ಗೃಹ ಸಚಿವರಿಗೆ ಲಗಾಮು ಹಾಕಿ:** ಗೃಹ ಸಚಿವರು ಪ್ರತಿದಿನ ತಮ್ಮ ವಿರುದ್ಧ ಮಾತನಾಡುತ್ತಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಮೌನವಾಗಿದ್ದರೂ ಗೃಹ ಸಚಿವರು ಮಾತ್ರ ಹೇಳಿಕೆ ನೀಡುತ್ತಿದ್ದಾರೆ ಎಂದು ಟೀಕಿಸಿದ ಅವರು, “ಕಾಂಗ್ರೆಸ್ ನಾಯಕರು ಮೊದಲು ತಮ್ಮ ಗೃಹ ಸಚಿವರಿಗೆ ಲಗಾಮು ಹಾಕಲಿ. ಜವಾಬ್ದಾರಿಯಿಂದ ಕೆಲಸ ಮಾಡುವಂತೆ ಸೂಚಿಸಲಿ. ನೀವು ಕೆರಳಿಸಿ ಮಾತನಾಡುವುದರಿಂದಲೇ ನಾವು ಅದೇ ಭಾಷೆಯಲ್ಲಿ ಉತ್ತರಿಸಬೇಕಾಗಿದೆ” ಎಂದರು.

**ಕೆಪಿಎಸ್‌ಸಿ ವಿಚಾರದಲ್ಲಿ ಸರ್ಕಾರಕ್ಕೆ ಪ್ರಶ್ನೆ:** ಕೆಪಿಎಸ್‌ಸಿ ನೇಮಕಾತಿ ಅಕ್ರಮದ ತನಿಖೆಗೆ ಸಂಬಂಧಿಸಿದಂತೆ ಹೈಕೋರ್ಟ್ ಆದೇಶದ ವಿರುದ್ಧ ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿರುವ ಸರ್ಕಾರದ ಕ್ರಮವನ್ನೂ ಕುಮಾರಸ್ವಾಮಿ ಪ್ರಶ್ನಿಸಿದರು.

“ಕೆಪಿಎಸ್‌ಸಿ ವಿಚಾರದಲ್ಲಿ ಪ್ರಿಯಾಂಕ್ ಖರ್ಗೆ ಈವರೆಗೆ ಏನು ಉತ್ತರ ನೀಡಿದ್ದಾರೆ? ನಾಲ್ವರು ಅಧಿಕಾರಿಗಳ ನೇಮಕಾತಿಗೆ ಸಂಬಂಧಿಸಿದಂತೆ ಹೈಕೋರ್ಟ್ ಆದೇಶ ನೀಡಿದಾಗ ಸುಪ್ರೀಂ ಕೋರ್ಟ್‌ಗೆ ಹೋಗಿದ್ದೇಕೆ? ಗೃಹ ಇಲಾಖೆಯಲ್ಲಿ ತಮಗೆ ಬೇಕಾದವರನ್ನೇ ನೇಮಿಸಿಕೊಂಡು, ತಮಗೆ ಬೇಕಾದ ರೀತಿಯಲ್ಲಿ ತನಿಖೆ ನಡೆಸಲು ಹೊರಟಿರುವುದು ಸರಿಯೇ?” ಎಂದು ಪ್ರಶ್ನಿಸಿದರು.

**ಕ್ಯಾಬಿನೆಟ್ ಮಾಹಿತಿ ಸೋರಿಕೆ ಬಗ್ಗೆ ಕಿಡಿ:** ಸಂಪುಟದ ರಹಸ್ಯ ಮಾಹಿತಿ ಸೋರಿಕೆಯಾಗಿರುವ ವಿಚಾರದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮೌನವನ್ನು ಕುಮಾರಸ್ವಾಮಿ ಟೀಕಿಸಿದರು. “ಕ್ಯಾಬಿನೆಟ್‌ನ ರಹಸ್ಯ ಸೋರಿಕೆ ಮಾಡಿದವರು ಯಾರು ಎಂಬುದಕ್ಕೆ ಕಾಲವೇ ಉತ್ತರ ನೀಡುತ್ತದೆ ಎಂದು ಮುಖ್ಯಮಂತ್ರಿ ಹೇಳುತ್ತಿದ್ದಾರೆ.

ತಮ್ಮ ವಿರುದ್ಧ ನ್ಯಾಯಾಲಯದಲ್ಲಿ ಹೇಳಿಕೆ ಕೊಡಿಸುವ ಮೂಲಕ ಪ್ರಕರಣದಲ್ಲಿ ಸಿಲುಕಿಸುವ ಸಂಚು ನಡೆಯುತ್ತಿದೆ ಎಂಬ ಆರೋಪವನ್ನೂ ಪುನರುಚ್ಚರಿಸಿದ ಅವರು, ಇಂತಹ ಪ್ರಕರಣಗಳು ಮತ್ತು ಬೆದರಿಕೆಗಳಿಗೆ ತಾವು ಹೆದರುವುದಿಲ್ಲ ಎಂದರು. ಸರ್ಕಾರದ ಕ್ರಮಗಳನ್ನು ಎದುರಿಸಲು ಸಿದ್ಧವಿದ್ದು, ತನಿಖೆ ನಡೆಸುವುದಾದರೆ ನಿಷ್ಪಕ್ಷಪಾತವಾಗಿ ನಡೆಸಲಿ ಎಂದು ಸವಾಲು ಹಾಕಿದರು.

ಕ್ಯಾಬಿನೆಟ್ ಮಾಹಿತಿ ಸೋರಿಕೆ, ಜೆಡಿಎಸ್ ಕಾರ್ಯಕರ್ತರ ಬಂಧನ ಮತ್ತು ಕೆಪಿಎಸ್‌ಸಿ ಅಕ್ರಮದ ಆರೋಪಗಳನ್ನು ಮುಂದಿಟ್ಟುಕೊಂಡು ರಾಜ್ಯ ಸರ್ಕಾರದ ವಿರುದ್ಧ ಕುಮಾರಸ್ವಾಮಿ ವಾಗ್ದಾಳಿ ಮುಂದುವರಿಸಿದರು.

## ದಾಖಲೆ ಕೊಡಿ, ತಪ್ಪು ಮಾಡಿದರೆ ಕುಮಾರಸ್ವಾಮಿ ಬಂಧನ ಖಚಿತ: ಪ್ರಿಯಾಂಕ್ ಖರ್ಗೆ

● ವಿಕ್ರಮ ವಾಹಿನಿ । ಬೆಂಗಳೂರು

ಸ್ಟಿಂಗ್ ಆಪರೇಷನ್ ಪ್ರಕರಣಕ್ಕೆ ಸಂಬಂಧಿಸಿದಂತೆ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಮತ್ತು ಗೃಹ ಸಚಿವ ಪ್ರಿಯಾಂಕ್ ಖರ್ಗೆ ನಡುವಿನ ವಾಕ್ಸಮರ ತೀವ್ರಗೊಂಡಿದೆ. “ಕುಮಾರಸ್ವಾಮಿ ಅವರ ಬಳಿ ಸಾಕ್ಷ್ಯಾಧಾರಗಳಿದ್ದರೆ ನೀಡಲಿ. ತಪ್ಪು ಮಾಡಿರುವುದು ಸಾಬೀತಾದರೆ ಅವರನ್ನು ಬಂಧಿಸುವುದು ಖಚಿತ” ಎಂದು ಪ್ರಿಯಾಂಕ್ ಖರ್ಗೆ ಎಚ್ಚರಿಕೆ ನೀಡಿದ್ದಾರೆ.

ವಿಧಾನಸೌಧದ ಕೆಂಗಲ್ ಗೇಟ್ ಬಳಿ ಬುಧವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಕರಣಕ್ಕೆ ಸಂಬಂಧಿಸಿದಂತೆ ದೂರು ಬಂದ ಹಿನ್ನೆಲೆಯಲ್ಲಿ ಕೆಲವರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಲಾಗಿದೆ. ತನಿಖೆಯಲ್ಲಿ ಕುಮಾರಸ್ವಾಮಿ ಅವರ ಮೇಲೂ ಅನುಮಾನ ಮೂಡಿದರೆ ಅವರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಲಾಗುವುದು ಎಂದರು.

‘ತಾಕತ್ತಿದ್ದರೆ ನನ್ನನ್ನು ಬಂಧಿಸಲಿ’ ಎಂಬ ಕುಮಾರಸ್ವಾಮಿ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, ಸುಮ್ಮನೆ ಯಾರನ್ನೂ ಬಂಧಿಸಲು ಸಾಧ್ಯವಿಲ್ಲ. ಬಂಧನ ಹೇಗೆ ಮಾಡಬೇಕೆಂಬುದನ್ನು ಕುಮಾರಸ್ವಾಮಿಯಿಂದ ಕಲಿಯುವ ಅಗತ್ಯವಿಲ್ಲ ಎಂದು ತೀಕ್ಷ್ಣವಾಗಿ ಹೇಳಿದರು.

“ಗಾಳಿಯಲ್ಲಿ ಗುಂಡು ಹಾರಿಸುವುದನ್ನು ಬಿಟ್ಟು, ನಿಮ್ಮ ಬಳಿ ದಾಖಲೆಗಳಿದ್ದರೆ ಒಪ್ಪಿಸಿ. ಸಾಕ್ಷ್ಯಾಧಾರಗಳಿದ್ದರೆ ಪೊಲೀಸ್ ಆಯುಕ್ತರ ಕಚೇರಿಗೆ ತೆರಳಿ ದೂರು ನೀಡಿ. ತಪ್ಪು ಮಾಡಿರುವುದು ದಾಖಲೆಗಳಿಂದ ಸಾಬೀತಾದರೆ ಕಾನೂನು ಕ್ರಮ ಕೈಗೊಳ್ಳುತ್ತೇವೆ” ಎಂದು ಪ್ರಿಯಾಂಕ್ ಖರ್ಗೆ ಹೇಳಿದರು. ಸ್ಟಿಂಗ್ ಆಪರೇಷನ್ ಪ್ರಕರಣದ ತನಿಖೆ ಹಾಗೂ ಪರಸ್ಪರ ಆರೋಪ–ಪ್ರತ್ಯಾರೋಪಗಳ ಹಿನ್ನೆಲೆಯಲ್ಲಿ ಆಡಳಿತಾರೂಢ ಕಾಂಗ್ರೆಸ್ ಮತ್ತು ಜೆಡಿಎಸ್ ನಡುವಿನ ರಾಜಕೀಯ ಸಂಘರ್ಷ ಮತ್ತಷ್ಟು ತೀವ್ರಗೊಂಡಿದೆ.

## ಖರ್ಗೆ ವಿರುದ್ಧ ಎಚ್‌ಡಿಕೆ ಬೆಂಕಿ: ‘ಗೃಹ ಇಲಾಖೆ ನಿಮ್ಮಪ್ಪ ಕೊಟ್ಟ ಜಹಗೀರಾ?

● ವಿಕ್ರಮ ವಾಹಿನಿ । ಬೆಂಗಳೂರು

“ಗೃಹ ಇಲಾಖೆ ಏನು ನಿಮ್ಮಪ್ಪ ನಿಮಗೆ ಕೊಟ್ಟ ಬಳುವಳಿಯೇ? ನಾನೇನು ನಿಮ್ಮಪ್ಪನ ಗಂಟು ತಿಂದಿದ್ದೀನಾ?” ಎಂದು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ಗೃಹ ಸಚಿವ ಪ್ರಿಯಾಂಕ್ ಖರ್ಗೆ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು.

ಜೆಡಿಎಸ್ ಕೇಂದ್ರ ಕಚೇರಿ ಜೆ.ಪಿ. ಭವನದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸ್ಟಿಂಗ್ ಆಪರೇಷನ್ ಪ್ರಕರಣಕ್ಕೆ ಸಂಬಂಧಿಸಿದಂತೆ ತಮ್ಮನ್ನು ವಿಚಾರಣೆಗೆ ಕರೆಯುವುದಾಗಿ ಹೇಳಿರುವ ಪ್ರಿಯಾಂಕ್ ಖರ್ಗೆ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಬ್ಲ್ಯಾಕ್‌ಮೇಲ್ ಮಾಡುವವರಿಗೆ ರಕ್ಷಣೆ ನೀಡಿ, ಪ್ರಶ್ನಿಸುವವರ ವಿರುದ್ಧವೇ ಕ್ರಮಕ್ಕೆ ಮುಂದಾಗುವುದು ಯಾವ ನ್ಯಾಯ ಎಂದು ಪ್ರಶ್ನಿಸಿದರು.

“ಮುಖ್ಯಮಂತ್ರಿಯವರನ್ನೇ ಯಾರೋ ಟ್ರ್ಯಾಪ್ ಮಾಡುತ್ತಾರೆ ಎಂದು ಗೃಹ ಸಚಿವರೇ ಹೇಳುತ್ತಾರೆ. ಹಾಗಾದರೆ ಅಂಥವರ ವಿರುದ್ಧ ಕ್ರಮ ಕೈಗೊಳ್ಳದೆ ಸರ್ಕಾರ ರಕ್ಷಣೆ ನೀಡುತ್ತಿರುವುದೇಕೆ? ರಾಕೇಶ್ ಶೆಟ್ಟಿ ಯಾರು? ಅವರಿಗೂ ಮುಖ್ಯಮಂತ್ರಿಗೂ ಏನು ಸಂಬಂಧ? ಸ್ಟಿಂಗ್ ನಡೆಸಿದವರು ರಾಜಾರೋಷವಾಗಿ ತಿರುಗುತ್ತಿದ್ದರೂ ಅವರನ್ನು ವಿಚಾರಣೆಗೆ ಒಳಪಡಿಸುವುದಿಲ್ಲ. ಆದರೆ ನನ್ನ ಮೇಲೆ ಅನುಮಾನ ಬಂದರೆ ವಶಕ್ಕೆ ಪಡೆಯುತ್ತೀರಾ?” ಎಂದು ಕುಮಾರಸ್ವಾಮಿ ಕಿಡಿಕಾರಿದರು.

ಜೆಡಿಎಸ್ ಕಾರ್ಯಕರ್ತರಿಗೆ ಬೆದರಿಕೆ ಹಾಕುವ ಬದಲು ತಮ್ಮನ್ನೇ ಬಂಧಿಸಿ ನೋಡಲಿ ಎಂದು ಸರ್ಕಾರಕ್ಕೆ ಸವಾಲು ಹಾಕಿದ ಅವರು, “ನನ್ನ ತಾಳ್ಮೆಗೂ ಮಿತಿ ಇದೆ. ಸುಳ್ಳು ಪ್ರಕರಣ ಹಾಗೂ ಬೆದರಿಕೆಗಳಿಗೆ ನಾನು ಜಗ್ಗುವುದಿಲ್ಲ” ಎಂದು ಎಚ್ಚರಿಸಿದರು.

ಹಾಲಿ ನ್ಯಾಯಮೂರ್ತಿಗಳಿಂದ ತನಿಖೆ ನಡೆಸಲಿ

ಸ್ಟಿಂಗ್ ಆಪರೇಷನ್ ಪ್ರಕರಣದ ಕುರಿತು ಸತ್ಯ ಹೊರಬರಬೇಕಾದರೆ ಹೈಕೋರ್ಟ್‌ನ ಹಾಲಿ ನ್ಯಾಯಮೂರ್ತಿಗಳ ನೇತೃತ್ವದಲ್ಲಿ ತನಿಖೆ ನಡೆಸಲಿ ಎಂದು ಕುಮಾರಸ್ವಾಮಿ ಆಗ್ರಹಿಸಿದರು.



ಮಾಜಿ ಮುಖ್ಯಮಂತ್ರಿ ವಿರುದ್ಧ ಸ್ಟಿಂಗ್ ಮಾಡಿದ ಕಿರಾತಕರನ್ನು ಎರಡು ದಿನಗಳ ಒಳಗಾಗಿ ಬಂಧಿಸಬೇಕು ಹಾಗೂ ಜೆಡಿಎಸ್ ಕಾರ್ಯಕರ್ತರು ಮತ್ತು ಸಾಮಾಜಿಕ ಜಾಲತಾಣದಲ್ಲಿ ಕೆಲಸ ಮಾಡುವ ಹುಡುಗರಿಗೆ ಕಿರುಕುಳ ನೀಡುವುದನ್ನು ನಿಲ್ಲಿಸಬೇಕು ಎಂದು ಆಗ್ರಹಿಸಿ ಕೇಂದ್ರ ಸಚಿವರಾದ ಕುಮಾರಸ್ವಾಮಿ ಅವರು ಬೆಂಗಳೂರು ನಗರ ಪೊಲೀಸ್ ಆಯುಕ್ತರ ಕಚೇರಿ ಎದರು ಧರಣಿ ನಡೆಸಿದರು. ತದನಂತರ ಸಚಿವರು ಮಾಧ್ಯಮಗಳ ಜೊತೆ ಮಾತನಾಡಿದರು.

“ಪ್ರಿಯಾಂಕ್ ಖರ್ಗೆ ಮತ್ತು ಡಿ.ಕೆ. ಶಿವಕುಮಾರ್ ಅವರಿಗೆ ತಾಕತ್ತಿದ್ದರೆ ಹೈಕೋರ್ಟ್‌ನ ಹಾಲಿ ನ್ಯಾಯಮೂರ್ತಿಗಳಿಂದ ತನಿಖೆ ಮಾಡಿಸಲಿ. ನಾನು ನೇರವಾಗಿ ಪ್ರಶ್ನಿಸುತ್ತಿದ್ದೇನೆ. ಹಿಂದಿನಿಂದ ಕುತಂತ್ರ ಮಾಡುವುದಿಲ್ಲ. ಸಿದ್ದರಾಮಯ್ಯ ಅವರಿಗೆ ಬೆನ್ನಿಗೆ ಚೂರಿ ಹಾಕಿದ ರೀತಿಯಲ್ಲಿ ಎಲ್ಲರಿಗೂ ಮಾಡಲು ಸಾಧ್ಯವಿಲ್ಲ. ನಿಮ್ಮ ಪಾಪದ ಕೊಡ ತುಂಬಿದೆ” ಎಂದು ವಾಗ್ದಾಳಿ ನಡೆಸಿದರು.

**ಎಇಇ ನೇಮಕ ಅಕ್ರಮದ ಬಗ್ಗೆ ಪ್ರಶ್ನೆ:** ಕೆಪಿಎಸ್‌ಸಿ ನೇಮಕಾತಿ ಅಕ್ರಮದ ವಿಚಾರವಾಗಿ ಪ್ರಿಯಾಂಕ್ ಖರ್ಗೆ ಅವರನ್ನು ತರಾಟೆಗೆ ತೆಗೆದುಕೊಂಡ ಕುಮಾರಸ್ವಾಮಿ, ಪಂಚಾಯತ್ ರಾಜ್ ಸಚಿವರಾಗಿದ್ದ ಅವಧಿಯಲ್ಲಿ 24 ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್‌ಗಳ (ಎಇಇ) ನೇಮಕಾತಿಯಲ್ಲಿ ಅಕ್ರಮ ನಡೆದಿದೆ ಎಂಬ ಆರೋಪಕ್ಕೆ ಸಂಬಂಧಿಸಿದ ದಾಖಲೆಗಳು ತಮ್ಮ ಬಳಿ ಇವೆ ಎಂದು ಹೇಳಿದರು.

ಪ್ರಾಮಾಣಿಕತೆ ಮತ್ತು ಪಾರದರ್ಶಕತೆಯ ಬಗ್ಗೆ ಮಾತನಾಡುವ ಪ್ರಿಯಾಂಕ್ ಖರ್ಗೆ ಅವರು, ಈ ನೇಮಕಾತಿ ಅಕ್ರಮದ ಆರೋಪಗಳಿಗೆ ಈವರೆಗೆ ಏಕೆ ಉತ್ತರ ನೀಡಿಲ್ಲ ಎಂದು ಪ್ರಶ್ನಿಸಿದರು. ಸ್ಟಿಂಗ್ ಆಪರೇಷನ್ ಪ್ರಕರಣದಲ್ಲಿ ತಮ್ಮ ವಿರುದ್ಧ ಕ್ರಮ ಕೈಗೊಳ್ಳುವ ಬದಲು ಆರೋಪಗಳಿಗೆ ಸಂಬಂಧಿಸಿದ ಎಲ್ಲ ಅಂಶಗಳ ಬಗ್ಗೆಯೂ ನಿಷ್ಪಕ್ಷಪಾತ ತನಿಖೆ ನಡೆಸಬೇಕು ಎಂದು ಕುಮಾರಸ್ವಾಮಿ ಒತ್ತಾಯಿಸಿದರು.

## ದಸರಾ ರಜೆ ಎಫೆಕ್ಟ್: ಆಗುಂಬೆ ಘಾಟಿಯಲ್ಲಿ ಟ್ರಾಫಿಕ್ ಜಾಮ್

● ವಿಕ್ರಮ ವಾಹಿನಿ । ಶಿವಮೊಗ್ಗ

ದಸರಾ ರಜೆ ಹಿನ್ನೆಲೆಯಲ್ಲಿ ಪ್ರವಾಸಿ ತಾಣಗಳಿಗೆ ತೆರಳುವವರ ಸಂಖ್ಯೆ ಹೆಚ್ಚಾಗಿದ್ದು, ಶಿವಮೊಗ್ಗ–ಉಡುಪಿ ಸಂಪರ್ಕಿಸುವ ಆಗುಂಬೆ ಘಾಟಿಯಲ್ಲಿ ಗುರುವಾರ ಕಿ.ಮೀ.ಗಟ್ಟಲೆ ವಾಹನಗಳ ಸಾಲು ಕಂಡುಬಂದಿತು. ಸುಮಾರು ಒಂದು ಗಂಟೆಗೂ ಹೆಚ್ಚು ಕಾಲ ವಾಹನಗಳು ಸಾಲುಗಟ್ಟಿ ನಿಂತಿದ್ದರಿಂದ ಪ್ರಯಾಣಿಕರು ಪರದಾಡಿದರು.

ಉಡುಪಿ, ಮಂಗಳೂರು ಹಾಗೂ ಶಿವಮೊಗ್ಗ ಮಾರ್ಗವಾಗಿ ಸಂಚರಿಸುವ ವಾಹನಗಳ ಸಂಖ್ಯೆ ಹೆಚ್ಚಾಗಿದ್ದರಿಂದ ಘಾಟಿಯಲ್ಲಿ ಸಂಚಾರ ದಟ್ಟಣೆ ಉಂಟಾಯಿತು. ಇದರ ನಡುವೆ ಘಾಟಿಯ ಮಧ್ಯಭಾಗದಲ್ಲಿ ಖಾಸಗಿ ಬಸ್ ಕೆಟ್ಟು ನಿಂತಿದ್ದರಿಂದ ವಾಹನಗಳ ಸಂಚಾರಕ್ಕೆ ಮತ್ತಷ್ಟು ಅಡಚಣೆಯಾಯಿತು.

ಸಂಚಾರ ದಟ್ಟಣೆಯನ್ನು ನಿಯಂತ್ರಿಸಲು ಸ್ಥಳೀಯ ಪೊಲೀಸರು ಹರಸಾಹಸಪಟ್ಟರು. ಘಾಟಿ ಮಾರ್ಗದಲ್ಲಿ ಸಂಚರಿಸುವ ವಾಹನ ಸವಾರರು ಎಚ್ಚರಿಕೆಯಿಂದ ವಾಹನ ಚಲಾಯಿಸುವಂತೆ ಸೂಚಿಸಲಾಗಿದೆ.

## ಹಸ್ತಾಂತರಗೊಂಡ ಗ್ರಾ.ಪಂ. ಖಾತೆಗಳಲ್ಲಿ ವಹಿವಾಟು: ತನಿಖೆಗೆ ಖಂಡ್ರೆ ಸೂಚನೆ

**ಕೋಲಾರ, ಅಲಿಯಾಬಾದ್, ಅಮಲಾಪುರದಲ್ಲಿ ಅಕ್ರಮದ ಆರೋಪ; 30 ದಿನಗಳಲ್ಲಿ ವರದಿ ಸಲ್ಲಿಸಲು ಆದೇಶ**

● ವಿಕ್ರಮ ವಾಹಿನಿ । ಬೆಂಗಳೂರು

ಗ್ರಾಮ ಪಂಚಾಯತಿಗಳು ನಗರ ಸ್ಥಳೀಯ ಸಂಸ್ಥೆಗಳಿಗೆ ಸಂಪೂರ್ಣವಾಗಿ ಹಸ್ತಾಂತರಗೊಂಡ ಬಳಿಕವೂ ಅವುಗಳ ಬ್ಯಾಂಕ್ ಖಾತೆಗಳಲ್ಲಿ ಹಣಕಾಸಿನ ವಹಿವಾಟು ನಡೆದಿರುವ ಆರೋಪದ ಕುರಿತು ಸಮಗ್ರ ತನಿಖೆ ನಡೆಸಿ 30 ದಿನಗಳಲ್ಲಿ ವರದಿ ಸಲ್ಲಿಸುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ. ಖಂಡ್ರೆ ಸೂಚಿಸಿದ್ದಾರೆ.



ಈ ಸಂಬಂಧ ಇಲಾಖೆಯ ಕಾರ್ಯದರ್ಶಿಗೆ ಲಿಖಿತ ಸೂಚನೆ ನೀಡಿರುವ ಅವರು, ಹಸ್ತಾಂತರಗೊಂಡ ಕೆಲವು ಗ್ರಾಮ ಪಂಚಾಯತಿಗಳ ಬ್ಯಾಂಕ್ ಖಾತೆಗಳಲ್ಲಿ ಅಧಿಕೃತ ಮಾದರಿ ಸಹಿ ಮತ್ತು ಕಚೇರಿಯ ಸೀಲು ಬಳಸಿ ವಹಿವಾಟು ನಡೆಸಿರುವ ಬಗ್ಗೆ ಬಂದಿರುವ ವರದಿಗಳನ್ನು ಗಂಭೀರವಾಗಿ ಪರಿಗಣಿಸಿದ್ದಾರೆ.

ಹಸ್ತಾಂತರದ ಬಳಿಕವೂ ಪಂಚಾಯತಿ ಖಾತೆಗಳಿಂದ ಹಣ ವೆಚ್ಚ ಮಾಡಲಾಗಿದೆಯೇ, ಅದಕ್ಕೆ ಅಧಿಕೃತ ಅನುಮತಿ ಇತ್ತೇ ಹಾಗೂ ಸಹಿ ಮತ್ತು ಸೀಲುಗಳನ್ನು ದುರ್ಬಳಕೆ ಮಾಡಲಾಗಿದೆಯೇ ಎಂಬುದನ್ನು ಪರಿಶೀಲಿಸಲು ಸಮಿತಿ ರಚಿಸುವಂತೆ ಸೂಚಿಸಿದ್ದಾರೆ.

**ಮೂರು ಗ್ರಾ.ಪಂ.ಗಳ ಖಾತೆಗಳ ಪರಿಶೀಲನೆ**

ಬೀದರ್ ನಗರಪಾಲಿಕೆಗೆ ಸಂಪೂರ್ಣವಾಗಿ ಹಸ್ತಾಂತರಗೊಂಡಿರುವ ಕೋಳಾರ, ಅಲಿಯಾಬಾದ್ ಮತ್ತು ಅಮಲಾಪುರ ಗ್ರಾಮ ಪಂಚಾಯತಿಗಳ ಬ್ಯಾಂಕ್ ಖಾತೆಗಳಲ್ಲಿ ನಂತರವೂ ವಹಿವಾಟು ನಡೆದು ಹಣ ವೆಚ್ಚವಾಗಿರುವ ಆರೋಪದ ಬಗ್ಗೆಯೂ ತನಿಖೆಗೆ ಆದೇಶಿಸಲಾಗಿದೆ.

ಹಸ್ತಾಂತರಗೊಂಡ ಗ್ರಾಮ ಪಂಚಾಯತಿಗಳಲ್ಲಿ ಹಿಂದೆ ಕಾರ್ಯನಿರ್ವಹಿಸಿದ್ದ ಸಿಬ್ಬಂದಿ ಹಾಗೂ ಬ್ಯಾಂಕ್ ಸಿಬ್ಬಂದಿ ಶಾಮೀಲಾಗಿರುವ ಸಾಧ್ಯತೆಯನ್ನೂ ಪರಿಶೀಲಿಸುವಂತೆ ಸೂಚಿಸಲಾಗಿದೆ. ವಹಿವಾಟಿಗೆ ಅಧಿಕೃತ ಆದೇಶಗಳಿದ್ದವೇ ಅಥವಾ ಅಧಿಕೃತ ಸಹಿ ಮತ್ತು ಸೀಲುಗಳ ದುರ್ಬಳಕೆ ನಡೆದಿದೆಯೇ ಎಂಬುದನ್ನು ತನಿಖೆ ಮಾಡಬೇಕಿದೆ.

**ಅಕ್ರಮ ಸಾಬೀತಾದರೆ ಕ್ರಮ:** ವಿವಾದಿತ ಸಹಿಗಳ ನೈಜತೆ ಪರಿಶೀಲಿಸಲು ಅವುಗಳನ್ನು ವಿಧಿವಿಜ್ಞಾನ ಪ್ರಯೋಗಾಲಯಕ್ಕೆ ಕಳುಹಿಸುವಂತೆ ಸಚಿವರು ಸೂಚಿಸಿದ್ದಾರೆ. ಮೇಲ್ನೋಟಕ್ಕೆ ಅಕ್ರಮ ನಡೆದಿರುವುದು ಕಂಡುಬಂದರೆ ಸಂಬಂಧಿತ ಸಿಬ್ಬಂದಿಯನ್ನು ಅಮಾನತುಗೊಳಿಸಿ, ಸ್ಥಳೀಯ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿ ಎಫ್‌ಐಆರ್ ದಾಖಲಿಸಲು ಕ್ರಮ ಕೈಗೊಳ್ಳಬೇಕು ಎಂದು ನಿರ್ದೇಶಿಸಿದ್ದಾರೆ.

ನಗರ ಸ್ಥಳೀಯ ಸಂಸ್ಥೆಗಳಿಗೆ ಹಸ್ತಾಂತರಗೊಂಡ ಗ್ರಾಮಗಳಲ್ಲಿನ ಪೂರ್ಣಗೊಂಡ ಹಾಗೂ ಪ್ರಗತಿಯಲ್ಲಿರುವ ಕಾಮಗಾರಿಗಳಿಗೆ ಗ್ರಾಮ ಪಂಚಾಯತಿಗಳೇ ಹಣ ಪಾವತಿಸಿರುವ ಪ್ರಕರಣಗಳಿದ್ದರೆ ಅವುಗಳನ್ನೂ ಪರಿಶೀಲಿಸಿ ವರದಿ ಸಲ್ಲಿಸುವಂತೆ ಸೂಚಿಸಲಾಗಿದೆ.

## ಹಬ್ಬದ ಹಿನ್ನೆಲೆಯಲ್ಲಿ ಸಿಹಿ ತಿಂಡಿ ಮಳಿಗೆಗಳಲ್ಲಿ ವಿಶೇಷ ತಪಾಸಣೆ



● ವಿಕ್ರಮ ವಾಹಿನಿ । ಬೆಂಗಳೂರು

ಹಬ್ಬಗಳ ಹಿನ್ನೆಲೆಯಲ್ಲಿ ಸಾರ್ವಜನಿಕರಿಗೆ ಸುರಕ್ಷಿತ ಹಾಗೂ ಗುಣಮಟ್ಟದ ಸಿಹಿ ತಿಂಡಿಗಳು ದೊರೆಯುವುದನ್ನು ಖಚಿತಪಡಿಸಿಕೊಳ್ಳಲು ರಾಜ್ಯಾದ್ಯಂತ ಅ.15ರಿಂದ 17ರವರೆಗೆ ವಿಶೇಷ ತಪಾಸಣಾ ಅಭಿಯಾನ ಹಮ್ಮಿಕೊಳ್ಳಲಾಗಿದೆ.

ಭಾರತೀಯ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರದ (ಎಫ್‌ಎಸ್‌ಎಸ್‌ಎಐ) ನಿರ್ದೇಶನದ ಮೇರೆಗೆ ಆಹಾರ ಸುರಕ್ಷತಾ ಅಧಿಕಾರಿಗಳು ಹಾಗೂ ಅಂಕಿತಾಧಿಕಾರಿಗಳು ತಮ್ಮ ತಮ್ಮ ಜಿಲ್ಲೆಗಳಲ್ಲಿರುವ ಸಿಹಿ ತಿಂಡಿ ತಯಾರಿಕಾ ಘಟಕಗಳು ಮತ್ತು ಮಾರಾಟ ಮಳಿಗೆಗಳಲ್ಲಿ ತಪಾಸಣೆ ನಡೆಸಲಿದ್ದಾರೆ. ಆಹಾರ ಪದಾರ್ಥಗಳ ಗುಣಮಟ್ಟ ಮತ್ತು ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳುವುದು ಈ ಅಭಿಯಾನದ ಉದ್ದೇಶವಾಗಿದೆ.

## ಸತ್ಯಸಾಯಿ ಗ್ರಾಮದಲ್ಲಿ ನವರಾತ್ರಿ ಪೂಜೆಯಲ್ಲಿ ಪಾಲ್ಗೊಂಡ ಕುಮಾರಸ್ವಾಮಿ

● ವಿಕ್ರಮ ವಾಹಿನಿ । ಮುದ್ದೇನಹಳ್ಳಿ (ಚಿಕ್ಕಬಳ್ಳಾಪುರ)

ಪ್ರಧಾನಿಗಳಾದ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಭಾರತವು ವಿಶ್ವದ ಮೂರನೇ ಬೃಹತ್ ಆರ್ಥಿಕ ಶಕ್ತಿ ಆಗುವತ್ತ ದಾಪುಗಾಲು ಇಡುತ್ತಿದೆ. ಅದಕ್ಕೆ ಪೂರಕವಾಗಿ ನಮ್ಮ ಸನಾತನ ಸಂಸ್ಕೃತಿ, ಮಮತೆ, ಪ್ರೀತಿ, ಕರುಣೆಯಿಂದ ಕೂಡ ಸಮಾಜ ಪರಮಪೂಜ್ಯ ಮಧುಸೂಧನ ಸಾಯಿ ಅವರ ನೇತೃತ್ವದಲ್ಲಿಯೇ ಪುನರುಜ್ಜೀವನ ಆಗಬೇಕು ಸಂಗೀತ ಎಂದು ಕೇಂದ್ರ ಸಚಿವರಾದ ಹೆಚ್.ಡಿ. ಕುಮಾರಸ್ವಾಮಿ ಅವರು ಹೇಳಿದರು.

ಇಲ್ಲಿನ ಶ್ರೀ ಸತ್ಯಸಾಯಿ ಗ್ರಾಮದಲ್ಲಿ ಶ್ರೀ ಶ್ರೀ ಮಧುಸೂಧನ ಸಾಯಿ ಅವರ ದಿವ್ಯ ಸಾನ್ನಿಧ್ಯದಲ್ಲಿ ನಡೆದ ನವರಾತ್ರಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಸಚಿವರು ಮಾತನಾಡಿದರು.

ಇದೊಂದು ಅಪರೂಪದ ಕಾರ್ಯಕ್ರಮ. ಮಾನವೀಯ ಮೌಲ್ಯಗಳನ್ನು ಕಲಿಕೆ, ದೈವ ಸೇವೆ, ಕರುಣೆ, ಪ್ರೀತಿ ಭಾವಗಳು, ಮೌಲ್ಯಗಳು ಇಲ್ಲಿ ನೆಲೆಸಿವೆ. ಸದ್ಗುರುಗಳ ಆಶಯಕ್ಕೆ ಅನುಗುಣವಾಗಿ ಇಲ್ಲಿ ನಡೆಯುತ್ತಿರುವ ಕಾರ್ಯಗಳು ನನಗೆ ದಿವ್ಯ ಅನುಭೂತಿ ನೀಡುವೆ ಎಂದರು ಕೇಂದ್ರ ಸಚಿವರು.

ನಮ್ಮ ಸಂಸ್ಕೃತಿ ಅನನ್ಯ ಸಂಕೇತವಾದ ವಿಜಯ ದಶಮಿಯ ಕಾಲ ಇದಾಗಿದ್ದು, ತಾಯಿ ಚಾಮುಂಡೇಶ್ವರಿ ಆರಾಧನೆ ಎಲ್ಲರೂ ಮಾಡುತ್ತಿದ್ದೇವೆ. ವಿಶೇಷವೆಂದರೆ ಇಂದು ಗುರುಗಳ ವಾರ ಗುರುವಾರ. ನಾನು ಗುರುಗಳ ಸಾನ್ನಿಧ್ಯಕ್ಕೆ ಬಂದಿದ್ದೇನೆ. ಇದು ಗುರುಕೃಪೆ ಎಂದು ಭಾವಿಸಿದ್ದೇನೆ ಎಂದು ಸಚಿವರು ನುಡಿದರು.





ಈ ಸಂಸ್ಥೆಗೆ ರಾಷ್ಟ್ರಪತಿಗಳು, ಪ್ರಧಾನಿಗಳು ಸೇರಿದಂತೆ ದೇಶ ವಿದೇಶಗಳ ಅನೇಕ ಮಹನೀಯರು ಬಂದು ಇಲ್ಲಿ ಸದ್ಗುರುಗಳು ಸೃಷ್ಟಿಸಿರುವ ಪವಾಡಸದೃಶ ಸೇವಾ ಪರಂಪರೆಯನ್ನು ವೀಕ್ಷಿಸಿದ್ದಾರೆ. ಒಂದು ಸರ್ಕಾರ ಮಾಡಲಾಗದ ಕಾರ್ಯಗಳನ್ನು ಸದ್ಗುರು ಅವರು ಸಾಕ್ಷಾತ್ಕರಿಸಿದ್ದಾರೆ. ಶಿಕ್ಷಣ, ಕಲೆ, ಸಂಸ್ಕೃತಿ, ಆರೋಗ್ಯ, ಪೌಷ್ಟಿಕಾಂಶ ನೀಡಿಕೆ ಮುಂತಾದ ಕಾರ್ಯಗಳಲ್ಲಿ ಸದ್ಗುರುಗಳ ಮುಂಚೂಣಿಯಲ್ಲಿ ನಿಂತು ಕೊಡುಗೆ ನೀಡುತ್ತಿದ್ದಾರೆ. ಇಲ್ಲಿನ ವಾತಾವರಣ ಕಂಡು ನಾನು ಧನ್ಯನಾಗಿದ್ದೇನೆ ಎಂದು ಸಚಿವ ಕುಮಾರಸ್ವಾಮಿ ಅವರು ಹೇಳಿದರು.

ಈಗಿನ ಸಮಾಜ ಯಾವ ದಿಕ್ಕಿನಲ್ಲಿದೆ ಎಂಬುದನ್ನು ನೋಡಿದರೆ ಕಳವಳ ಆಗುತ್ತದೆ. ಒಂದು ಜಗತ್ತು, ಒಂದು ಕುಟುಂಬ ಎನ್ನುವ ಭಾವನೆ ಬಹಳ ಶ್ರೇಷ್ಠ ಎಂಬುದು ನನ್ನ ಭಾವನೆ. ಜಗತ್ತಿನಲ್ಲಿ ಯುದ್ಧಗಳು ನಡೆಯುತ್ತಿವೆ, ಅಭಿವೃದ್ಧಿ ಬದಲು ಸಂಘರ್ಷ ಉಂಟಾಗಿದೆ, ಮನುಷ್ಯ ಅಶಾಂತಿಯಲ್ಲಿ ಇದ್ದಾನೆ. ಅಭಿವೃದ್ಧಿ ಪೈಪೋಟಿಯ ನಡುವೆ ಮಾನವೀಯತೆ ಸಾರುತ್ತಿರುವ ಈ ಮಹಾನ್ ಸಂಸ್ಥೆ ಪ್ರಭಾವಶೀಲವಾಗಿದೆ ಎಂದರು ಸಚಿವರು.

ನಾಡಿನಲ್ಲಿ, ದೇಶದಲ್ಲಿ ಅಭಿವೃದ್ಧಿ ಕಾಣುತ್ತಿದ್ದೇವೆ. ಸಂಸ್ಕೃತಿ ಮನವಿಯ ಮೌಲ್ಯಗಳು ನಶಿಸುತ್ತಿವೆ. ಪರಿಶುದ್ಧ ಮನಸು ಎಲ್ಲರಿಗೂ ಅಗತ್ಯವಾಗಿದೆ. ಸಮಾನತೆ ಕೇವಲ ಘೋಷಣೆಗೆ ಮಾತ್ರ ಸೀಮಿತವಾಗಿದೆ, ಸದ್ಗುರುಗಳು ಅದನ್ನು ಕಾರ್ಯರೂಪಕ್ಕೆ ತಂದಿದ್ದಾರೆ, ಇದು ನಮಗೆಲ್ಲರಿಗೂ ಪ್ರೇರಣೆ ನೀಡುತ್ತಿದೆ. ನಾಡಿನ ಪ್ರತಿ ಕುಟುಂಬ ನೆಮ್ಮದಿ, ಸಮೃದ್ಧಿ ಕೂಡಿರಬೇಕು ಎಂಬುದು ನನ್ನ ಕನಸು. ನನ್ನ ಕನಸು ನನಸಾಗಿಲ್ಲ. ಸದ್ಗುರುಗಳೇ ನನ್ನ ಕನಸಿಗೆ ಶಕ್ತಿ ತುಂಬಿ ಆಶೀರ್ವದಿಸಬೇಕು ಎಂದು ಪ್ರಾರ್ಥಿಸುತ್ತೇನೆ ಎಂದರು ಕುಮಾರಸ್ವಾಮಿ ಅವರು.

ಶಿಕ್ಷಣ, ಆರೋಗ್ಯ ದುಬಾರಿಯಾಗಿದೆ. ಶ್ರೀಗಳು ಅದನ್ನು ಉಚಿತವಾಗಿ ಕೊಡುತ್ತಿದ್ದಾರೆ. ಇದು ನಾಡಿಗೆ ದಾರಿದೀಪ. ಸದ್ಗುರುಗಳ ದೂರದೃಷ್ಟಿ, ಅನುಷ್ಠಾನದ ರೀತಿ ನೋಡಿ ನಾನು ಚಕಿತನಾಗಿದ್ದೇನೆ. ಗುಣಾತ್ಮಕ, ರಚನಾತ್ಮಕ ಹಾಗೂ ಮಾನವೀಯ ಮೌಲ್ಯಗಳನ್ನು ರೂಪಿಸುವ ಶಿಕ್ಷಣದ ರೂವಾರಿಗಳಾಗಿ ಅವರು ಸಮಾಜಕ್ಕೆ ದೊಡ್ಡ ಶಕ್ತಿಯಾಗಿದ್ದಾರೆ. ಸದ್ಗುರುಗಳ ಸಾನ್ನಿಧ್ಯದಲ್ಲಿ ಹೇಳುತ್ತಿದ್ದೇನೆ. ಸದ್ಗುರುಗಳ ಮಾರ್ಗದರ್ಶನದಲ್ಲಿ ನನ್ನ ಗುರಿ ಮುಟ್ಟುವ ಕೆಲಸ ಮಾಡುತ್ತೇನೆ ಎಂದರು ಕುಮಾರಸ್ವಾಮಿ ಅವರು.

ಶ್ರೀ ಶ್ರೀ ಸದ್ಗುರು ಮಧುಸೂಧನ ಸಾಯಿ ಅವರು ತಮ್ಮ ಆಶೀರ್ವಚನ ನೀಡಿದರು. ಟ್ರಸ್ಟಿ ನರಸಿಂಹ ಮೂರ್ತಿ ಅವರು ಉಪಸ್ಥಿತರಿದ್ದರು.

## ಬೆಂಗಳೂರಲ್ಲಿ ಮಳೆ ಅಬ್ಬರ: ಜಲಾವೃತ ರಸ್ತೆಗಳು, ಟ್ರಾಫಿಕ್ ಜಾಮ್

● ವಿಕ್ರಮ ವಾಹಿನಿ । ಬೆಂಗಳೂರು

ಬಿಸಿಲಿನ ಬೇಗೆಯಿಂದ ಕಂಗೆಟ್ಟಿದ್ದ ರಾಜಧಾನಿಯಲ್ಲಿ ಗುರುವಾರ ಸಂಜೆ ಧಾರಾಕಾರ ಮಳೆ ಸುರಿದಿದ್ದು, ನಗರದ ಹಲವು ಪ್ರಮುಖ ರಸ್ತೆಗಳು ಜಲಾವೃತಗೊಂಡವು. ಏಕಾಏಕಿ ಸುರಿದ ಗುಡುಗು ಸಹಿತ ಮಳೆಯಿಂದ ವಾಹನ ಸಂಚಾರಕ್ಕೆ ಅಡ್ಡಿಯುಂಟಾಗಿ, ಕೆಲಸ ಮುಗಿಸಿ ಮನೆಗೆ ಮರಳುತ್ತಿದ್ದವರು ಪರದಾಡಿದರು.

ಮೆಜೆಸ್ಟಿಕ್, ಟೌನ್‌ಹಾಲ್, ಕೆ.ಆರ್. ಮಾರುಕಟ್ಟೆ, ಜಯನಗರ, ಶೇಷಾದ್ರಿಪುರಂ, ವಿಧಾನಸೌಧದ ಸುತ್ತಮುತ್ತ, ಮಲ್ಲೇಶ್ವರಂ, ರಾಜಾಜಿನಗರ, ಮೈಸೂರು ಬ್ಯಾಂಕ್ ವೃತ್ತ, ಕಾರ್ಪೊರೇಷನ್, ಲಾಲ್‌ಬಾಗ್, ಬಸವನಗುಡಿ ಹಾಗೂ ಗಾಂಧಿ ಬಜಾರ್ ಸೇರಿದಂತೆ ಹಲವು ಪ್ರದೇಶಗಳಲ್ಲಿ ಮಳೆ ಅಬ್ಬರಿಸಿತು.

ಭಾರಿ ಮಳೆಯಿಂದ ಬೆಂಗಳೂರು–ಹೊಸೂರು ಹೆದ್ದಾರಿಯ ಚಂದಾಪುರ ಸಮೀಪದ ಕಿತ್ತಾಗನಹಳ್ಳಿ ಕ್ರಾಸ್ ಬಳಿ ರಸ್ತೆಯಲ್ಲಿ ನೀರು ನಿಂತು ವಾಹನ ಸಂಚಾರ ನಿಧಾನಗೊಂಡಿತು. ಚರಂಡಿಗಳಲ್ಲಿ ಕಸ, ಕಡ್ಡಿಗಳು ತುಂಬಿಕೊಂಡು ಮಳೆ ನೀರು ಸರಾಗವಾಗಿ ಹರಿಯಲು ಅಡ್ಡಿಯಾಗಿರುವುದೇ ಜಲಾವೃತಕ್ಕೆ ಕಾರಣ ಎಂದು ಸ್ಥಳೀಯರು ದೂರಿದ್ದಾರೆ. ಪ್ರತಿ ಬಾರಿ ಮಳೆ ಬಂದಾಗಲೂ ಇದೇ ಸಮಸ್ಯೆ ಎದುರಾಗುತ್ತಿದೆ ಎಂದು ವಾಹನ ಸವಾರರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ರಸ್ತೆಯಲ್ಲಿ ನಿಂತ ನೀರಿನ ನಡುವೆಯೇ ವಾಹನಗಳು ಸಂಚರಿಸಬೇಕಾದ ಪರಿಸ್ಥಿತಿ ನಿರ್ಮಾಣವಾಗಿದ್ದು, ಕೆಲವೆಡೆ ಸಂಚಾರ ದಟ್ಟಣೆ ಉಂಟಾಯಿತು. ಹೆದ್ದಾರಿಯಲ್ಲಿ ಮಳೆ ನೀರು ಹರಿದುಹೋಗಲು ಸೂಕ್ತ ವ್ಯವಸ್ಥೆ ಕಲ್ಪಿಸುವಂತೆ ವಾಹನ ಸವಾರರು ಸಂಬಂಧಪಟ್ಟ ಪ್ರಾಧಿಕಾರವನ್ನು ಒತ್ತಾಯಿಸಿದ್ದಾರೆ.

www.VIKRAMAVAHINI.com
|| ಕನ್ನಡ ದಿನಪತ್ರಿಕೆ ||
PRGI NO: KARKAN/2018/78481
ವಿಕ್ರಮ ವಾಹಿನಿ

## ವೈದ್ಯಕೀಯ ಪ್ರವೇಶದ ನಾಲ್ಕನೇ ಸುತ್ತಿನ ಕೌನ್ಸೆಲಿಂಗ್ ಆರಂಭ

● ವಿಕ್ರಮ ವಾಹಿನಿ । ಕೋಟಾ

ನೀಟ್ ಫಲಿತಾಂಶದ ಆಧಾರದ ಮೇಲೆ ಎಂಬಿಬಿಎಸ್, ಬಿಡಿಎಸ್ ಹಾಗೂ ಬಿ.ಎಸ್ಸಿ. ನರ್ಸಿಂಗ್ ಕೋರ್ಸ್‌ಗಳ ಪ್ರವೇಶಕ್ಕಾಗಿ ವೈದ್ಯಕೀಯ ಕೌನ್ಸೆಲಿಂಗ್ ಸಮಿತಿ (ಎಂಸಿಸಿ) ನಾಲ್ಕನೇ ಸುತ್ತಿನ ಕೌನ್ಸೆಲಿಂಗ್ ಆರಂಭಿಸಿದೆ. 'ಸ್ಟ್ರೇ ವೆಕನ್ಸಿ ರೌಂಡ್' ಎಂದು ಕರೆಯಲಾಗುವ ಈ ಸುತ್ತಿನಲ್ಲಿ ಲಭ್ಯವಿರುವ ಸೀಟುಗಳ ವಿವರವನ್ನು ಸಮಿತಿ ಬಿಡುಗಡೆ ಮಾಡಿದೆ.

ಈ ಸುತ್ತಿನಲ್ಲಿ ಒಟ್ಟು 3,426 ಎಂಬಿಬಿಎಸ್, 499 ಬಿಡಿಎಸ್ ಹಾಗೂ 143 ಬಿ.ಎಸ್ಸಿ. ನರ್ಸಿಂಗ್ ಸೀಟುಗಳಿಗೆ ಪ್ರವೇಶ ಕಲ್ಪಿಸಲಾಗುತ್ತದೆ. ಎಂಬಿಬಿಎಸ್ ಸೀಟುಗಳಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜುಗಳ 1,245 ಹಾಗೂ ಅಖಿಲ ಭಾರತ ವೈದ್ಯಕೀಯ ವಿಜ್ಞಾನ ಸಂಸ್ಥೆಗಳ (ಏಮ್ಸ್) 39 ಸೀಟುಗಳು ಸೇರಿವೆ. ಡೀಮ್ಡ್ ವಿಶ್ವವಿದ್ಯಾಲಯಗಳಲ್ಲಿ ಸ್ವಯಂ ಹಣಕಾಸು ಆಧಾರಿತ 2,165 ಸೀಟುಗಳು ಲಭ್ಯವಿದ್ದು, ಇದರಲ್ಲಿ 16 ಅನಿವಾಸಿ ಭಾರತೀಯರ ಕೋಟಾದ ಸೀಟುಗಳಿವೆ.

ಡೀಮ್ಡ್ ವಿಶ್ವವಿದ್ಯಾಲಯಗಳಲ್ಲಿ ಎಂಬಿಬಿಎಸ್ ಕೋರ್ಸ್ ಶುಲ್ಕ ಸುಮಾರು 80 ಲಕ್ಷದಿಂದ 1.5 ಕೋಟಿ ವರೆಗೆ ಇರಬಹುದು. ಹೀಗಾಗಿ, ವಿದ್ಯಾರ್ಥಿಗಳು ಕಾಲೇಜು ಆಯ್ಕೆ ಮಾಡುವ ಮೊದಲು ಶುಲ್ಕ ಮತ್ತು ಪ್ರವೇಶ ನಿಯಮಗಳನ್ನು ಪರಿಶೀಲಿಸುವುದು ಅಗತ್ಯ ಎಂದು ವೃತ್ತಿ ಮಾರ್ಗದರ್ಶನ ತಜ್ಞರು ಸಲಹೆ ನೀಡಿದ್ದಾರೆ. ಬಿಡಿಎಸ್ ಕೋರ್ಸ್‌ನ ಸೀಟುಗಳಲ್ಲಿ ಸರ್ಕಾರಿ ದಂತ ವೈದ್ಯಕೀಯ ಕಾಲೇಜುಗಳ 321, ಡೀಮ್ಡ್ ವಿಶ್ವವಿದ್ಯಾಲಯಗಳ ಸ್ವಯಂ ಹಣಕಾಸು ವಿಭಾಗದ 103 ಹಾಗೂ ಅನಿವಾಸಿ ಭಾರತೀಯರ ಕೋಟಾದ 75 ಸೀಟುಗಳು ಸೇರಿವೆ.

ಪರಿಷ್ಕೃತ ವೇಳಾಪಟ್ಟಿಯ ಪ್ರಕಾರ, ಅಕ್ಟೋಬರ್ 14ರಿಂದ 16ರವರೆಗೆ ವಿದ್ಯಾರ್ಥಿಗಳು ಕಾಲೇಜು ಮತ್ತು ಕೋರ್ಸ್‌ಗಳ ಆಯ್ಕೆಗಳನ್ನು ಭರ್ತಿ ಮಾಡಬಹುದು. ಆಯ್ಕೆಗಳನ್ನು ಅಂತಿಮಗೊಳಿಸುವ ಮೊದಲು ಸೀಟುಗಳ ಲಭ್ಯತೆ, ಶುಲ್ಕ ಹಾಗೂ ಪ್ರವೇಶ ನಿಯಮಗಳನ್ನು ಪರಿಶೀಲಿಸಬೇಕು. ಆಯ್ಕೆಗಳನ್ನು ಲಾಕ್ ಮಾಡಿದ ಬಳಿಕ ಬದಲಾವಣೆಗೆ ಅವಕಾಶವಿರುವುದಿಲ್ಲ ಎಂದು ಸೂಚಿಸಲಾಗಿದೆ.

## ಬಂಡೀಪುರದಲ್ಲಿ ಹುಲಿ ಸಾವು, ಆನೆ ದಂತ ನಾಪತ್ತೆ: ತನಿಖೆಗೆ ಆದೇಶ

● ವಿಕ್ರಮ ವಾಹಿನಿ । ಬೆಂಗಳೂರು

ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ಮದ್ದೂರು ವಲಯದಲ್ಲಿ ಹುಲಿ ಉರುಳಿಗೆ ಸಿಲುಕಿ ಮೃತಪಟ್ಟಿರುವುದು ಹಾಗೂ ಕರಡಿಕಲ್ಲು ಗುಡ್ಡ ಪ್ರದೇಶದಲ್ಲಿ ಕಾಡಾನೆಯ ದಂತ ನಾಪತ್ತೆಯಾಗಿರುವ ಪ್ರಕರಣಗಳ ಕುರಿತು ಸಮಗ್ರ ತನಿಖೆ ನಡೆಸುವಂತೆ ಅರಣ್ಯ ಸಚಿವ ರಾಮಲಿಂಗಾರೆಡ್ಡಿ ಆದೇಶಿಸಿದ್ದಾರೆ. ಅರಣ್ಯ ಸಂರಕ್ಷಣಾಧಿಕಾರಿಗಳು ಒಂದು ವಾರದೊಳಗೆ ವರದಿ ಸಲ್ಲಿಸುವಂತೆ ಸೂಚಿಸಿದ್ದಾರೆ.

ಹುಲಿ ಸಂರಕ್ಷಿತ ಪ್ರದೇಶದಲ್ಲಿಯೇ ಇಂತಹ ಘಟನೆಗಳು ನಡೆದಿರುವುದು ಅರಣ್ಯ ಇಲಾಖೆಯ ಗಸ್ತು, ಮೇಲ್ವಿಚಾರಣೆ ಹಾಗೂ ಭದ್ರತಾ ವ್ಯವಸ್ಥೆಯ ಬಗ್ಗೆ ಪ್ರಶ್ನೆಗಳನ್ನು ಹುಟ್ಟುಹಾಕಿದೆ. ಕಳ್ಳಬೇಟೆಗಾರರ ಪ್ರವೇಶ, ಅಧಿಕಾರಿಗಳ ಕರ್ತವ್ಯಲೋಪ ಮತ್ತು ಮುನ್ನೆಚ್ಚರಿಕಾ ಕ್ರಮಗಳಲ್ಲಿನ ಕೊರತೆ ಕುರಿತು ಪರಿಶೀಲನೆ ನಡೆಸುವಂತೆ ಸಚಿವರು ಸೂಚಿಸಿದ್ದಾರೆ. ತನಿಖೆಯಲ್ಲಿ ನಿರ್ಲಕ್ಷ್ಯ ಸಾಬೀತಾದರೆ ಸಂಬಂಧಪಟ್ಟ ಅಧಿಕಾರಿಗಳು ಮತ್ತು ಸಿಬ್ಬಂದಿ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದ್ದಾರೆ.

ರಾಜ್ಯದ ಎಲ್ಲ ಉಪ ಅರಣ್ಯ ಸಂರಕ್ಷಣಾಧಿಕಾರಿಗಳು ಹಾಗೂ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು ತಮ್ಮ ವ್ಯಾಪ್ತಿಯ ಅರಣ್ಯ ಪ್ರದೇಶಗಳಿಗೆ ನಿಯಮಿತವಾಗಿ ಭೇಟಿ ನೀಡಿ ಗಸ್ತು ಮತ್ತು ಭದ್ರತಾ ವ್ಯವಸ್ಥೆಯನ್ನು ಪರಿಶೀಲಿಸಬೇಕು. ಬಂಡೀಪುರ ಸೇರಿದಂತೆ ಪ್ರಮುಖ ಅರಣ್ಯ ಪ್ರದೇಶಗಳಲ್ಲಿ ವನ್ಯಜೀವಿಗಳ ರಕ್ಷಣೆಗೆ ಅಗತ್ಯ ಮುನ್ನೆಚ್ಚರಿಕಾ ಕ್ರಮ ಕೈಗೊಳ್ಳುವಂತೆಯೂ ನಿರ್ದೇಶಿಸಿದ್ದಾರೆ.

# ಡಾ. ಸುಧಾ ಯಾದವ್ ರಾಜ್ಯದ ಎರಡನೇ ಮಹಿಳಾ ರಾಜ್ಯಪಾಲರಾಗಿ ಪದಗ್ರಹಣ

● ವಿಕ್ರಮ ವಾಹಿನಿ । ಬೆಂಗಳೂರು

ಕರ್ನಾಟಕದ ನೂತನ ರಾಜ್ಯಪಾಲರಾಗಿ ಗುರುವಾರ ಬಿಜೆಪಿ ಹಿರಿಯ ನಾಯಕಿ ಡಾ. ಸುಧಾ ಯಾದವ್ ಅವರು ಅಧಿಕೃತವಾಗಿ ಅಧಿಕಾರ ಸ್ವೀಕರಿಸಲಿದ್ದಾರೆ. ಲೋಕಭವನದ ಗಾಜಿನ ಅರಮನೆಯಲ್ಲಿ ನಡೆಯಲಿರುವ ವರ್ಣ ರಂಜಿತ ಸಮಾರಂಭದಲ್ಲಿ ನೂತನ ರಾಜ್ಯಪಾಲರಿಗೆ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ಅವರು ಅಧಿಕಾರ ಗೌಪ್ಯತೆ ಬೋಧಿಸಲಿದ್ದಾರೆ. ಈ ಮೂಲಕ ಕರ್ನಾಟಕದ ಎರಡನೇ ಮಹಿಳಾ ರಾಜ್ಯಪಾಲ ಎಂಬ ಹೆಗ್ಗಳಿಕೆಗೆ ಡಾ.ಸುಧಾ ಯಾದವ್ ಪಾತ್ರರಾಗಲಿದ್ದಾರೆ.

ಈ ಹಿಂದೆ ರಾಜ್ಯದ ಮೊದಲ ಮಹಿಳಾ ರಾಜ್ಯಪಾಲರಾಗಿ ವಿ.ಎಸ್.ರಮಾದೇವಿ ಅವರು 1999ರಿಂದ 2002ರ ಅವಧಿಯಲ್ಲಿ ಕಾರ್ಯನಿರ್ವಹಿಸಿದ್ದರು. ಕರ್ನಾಟಕದ ಹಾಲಿ ರಾಜ್ಯಪಾಲರರಿಂದ ಥಾವರ್‌ಚಂದ್ ಗೆಹ್ಲೋಟ್ ಅವರ ಅಧಿಕಾರವಧಿ ಮುಕ್ತಾಯವಾದ ಹಿನ್ನೆಲೆಯಲ್ಲಿ ತೆರವಾದ ಸ್ಥಾನಕ್ಕೆ ಡಾ. ಸುಧಾ ಯಾದವ್ ಅವರನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ಕಳೆದ ಅ.12ರಂದು ನೇಮಕ ಮಾಡಿ ಅಧಿಸೂಚನೆ ಹೊರಡಿಸಿದ್ದರು. ನಾಳೆ ನಡೆಯಲಿರುವ ಕಾರ್ಯಕ್ರಮಕ್ಕೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೇರಿದಂತೆ ಸಚಿವ ಸಂಪುಟದ ಸಹೋದ್ಯೋಗಿಗಳು ಹಾಗೂ ಇತರ ಗಣ್ಯರು ಭಾಗಿಯಾಗಲಿದ್ದಾರೆ.

**1999ರಲ್ಲಿ ಲೋಕಸಭೆ ಪ್ರವೇಶ:** ಸುಧಾ ಯಾದವ್ ಅವರ ರಾಜಕೀಯ ಪಯಣಕ್ಕೆ 1999ರ ಲೋಕಸಭಾ ಚುನಾವಣೆ ಪ್ರಮುಖ ವೇದಿಕೆಯಾಯಿತು. ಭಾರತೀಯ ಜನತಾ ಪಕ್ಷವು ಹರಿಯಾಣದ ಮಹೇಂದ್ರಗಢ ಲೋಕಸಭಾ ಕ್ಷೇತ್ರದಿಂದ ಅವರಿಗೆ ಟಿಕೆಟ್ ನೀಡಿತ್ತು. ಚುನಾವಣೆಯಲ್ಲಿ ಗೆಲುವು ಸಾಧಿಸಿದ ಅವರು ಸಂಸತ್ ಪ್ರವೇಶಿಸಿ 2004ರವರೆಗೆ ಕ್ಷೇತ್ರವನ್ನು ಪ್ರತಿನಿಧಿಸಿದರು.

### ಯಾರು ಈ ಡಾ. ಸುಧಾ ಯಾದವ್?

ಡಾ. ಸುಧಾ ಯಾದವ್ ಅವರು ಹರಿಯಾಣದ ರೇವಾರಿ ಜಿಲ್ಲೆಯ ಮೊಟ್ಲಾ ಕಲಾನ್ ಗ್ರಾಮದಲ್ಲಿ ಜನಿಸಿದವರು. ರಸಾಯನಶಾಸ್ತ್ರದಲ್ಲಿ ಉನ್ನತ ಶಿಕ್ಷಣ ಪಡೆದಿರುವ ಅವರು, ರೂರ್ಕಿ ವಿಶ್ವವಿದ್ಯಾಲಯದಿಂದ ಎಂಎಸ್ಸಿ ಹಾಗೂ ಪಿಎಚ್‌ಡಿ ಪದವಿಗಳನ್ನು ಪಡೆದಿದ್ದಾರೆ. ಪ್ರಸ್ತುತ ಈ ಸಂಸ್ಥೆ ಭಾರತೀಯ ತಂತ್ರಜ್ಞಾನ ಸಂಸ್ಥೆ ರೂರ್ಕಿ (ಐಐಟಿ ರೂರ್ಕಿ) ಎಂದು ಪ್ರಸಿದ್ಧವಾಗಿದೆ.



ವಿಜ್ಞಾನ ಕ್ಷೇತ್ರದಲ್ಲಿ ಶೈಕ್ಷಣಿಕ ಅರ್ಹತೆ ಗಳಿಸಿದ್ದ ಸುಧಾ ಯಾದವ್ ಅವರ ಬದುಕಿನಲ್ಲಿ 1999ರ ಕಾರ್ಗಿಲ್ ಯುದ್ಧ ಮಹತ್ವದ ತಿರುವು ತಂದಿತು. ಗಡಿ ಭದ್ರತಾ ಪಡೆ (ಬಿಎಸ್‌ಎಫ್)ಯಲ್ಲಿ ಡೆಪ್ಯುಟಿ ಕಮಾಂಡೆಂಟ್ ಆಗಿದ್ದ ಅವರ ಪತಿ ಸುಖಬೀರ್ ಸಿಂಗ್ ಯಾದವ್ ಕಾರ್ಗಿಲ್ ಯುದ್ಧದ ಸಂದರ್ಭದಲ್ಲಿ ಹುತಾತರಾದರು. ಪತಿಯ ನಿಧನದ ಬಳಿಕ ಅವರು ಸಾರ್ವಜನಿಕ ಜೀವನ ಮತ್ತು ರಾಜಕೀಯದಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡರು.

ವೈಯಕ್ತಿಕ ಬದುಕಿನ ಸಂಕಷ್ಟದ ನಡುವೆಯೂ ಸಾರ್ವಜನಿಕ ಸೇವೆಯ ಹಾದಿ ಹಿಡಿದ ಅವರು, ಕ್ರಮೇಣ ಹರಿಯಾಣದ ರಾಜಕೀಯದಲ್ಲಿ ಗುರುತಿಸಿಕೊಂಡು ರಾಷ್ಟ್ರಮಟ್ಟದ ರಾಜಕೀಯ ನಾಯಕಿಯಾಗಿ ಬೆಳೆದರು.

ಸಂಸದೆಯಾಗಿ ಕಾರ್ಯನಿರ್ವಹಿಸಿದ ಬಳಿಕ ಬಿಜೆಪಿ ಸಂಘಟನೆಯಲ್ಲಿ ವಿವಿಧ ಜವಾಬ್ದಾರಿಗಳನ್ನು ನಿರ್ವಹಿಸಿದರು. ಪಕ್ಷದ ರಾಷ್ಟ್ರೀಯ ಕಾರ್ಯದರ್ಶಿಯಾಗಿ ಸೇವೆ ಸಲ್ಲಿಸಿದ ಅವರು, ಹಿಂದುಳಿದ ವರ್ಗಗಳ ಸಂಘಟನೆಯಾದ ಬಿಜೆಪಿ ಒಬಿಸಿ ಮೋರ್ಚಾದ ಜವಾಬ್ದಾರಿಯನ್ನೂ ವಹಿಸಿಕೊಂಡಿದ್ದರು.

2019ರಿಂದ 2022ರವರೆಗೆ ರಾಷ್ಟ್ರೀಯ ಹಿಂದುಳಿದ ವರ್ಗಗಳ ಆಯೋಗದ ಸದಸ್ಯೆಯಾಗಿಯೂ ಕಾರ್ಯನಿರ್ವಹಿಸಿದ ಅನುಭವ ಅವರಿಗಿದೆ. 2022ರ ಆಗಸ್ಟ್‌ನಲ್ಲಿ ಬಿಜೆಪಿಯ ಅತ್ಯುನ್ನತ ನಿರ್ಧಾರ ಕೈಗೊಳ್ಳುವ ಸಂಸ್ಥೆಗಳಲ್ಲಿ ಒಂದಾದ ಸಂಸದೀಯ ಮಂಡಳಿಗೆ ಅವರನ್ನು ಸೇರ್ಪಡೆಗೊಳಿಸಲಾಯಿತು. ಪಕ್ಷದ ಕೇಂದ್ರ ಚುನಾವಣಾ ಸಮಿತಿಯಲ್ಲಿಯೂ ಅವರು ಸ್ಥಾನ ಪಡೆದರು.

ಹೀಗೆ ಶಿಕ್ಷಣ, ಸಂಸದೀಯ ರಾಜಕೀಯ, ಪಕ್ಷದ ಸಂಘಟನೆ ಹಾಗೂ ಹಿಂದುಳಿದ ವರ್ಗಗಳ ಸಂಬಂಧಿತ ಸಂಸ್ಥೆಗಳಲ್ಲಿ ಕೆಲಸ ಮಾಡಿದ ಅನುಭವ ಅವರ ಸಾರ್ವಜನಿಕ ಜೀವನದ ಪ್ರಮುಖ ಭಾಗವಾಗಿದೆ.

ರಾಜ್ಯಪಾಲರ ಹುದ್ದೆಯು ಸಂವಿಧಾನಾತ್ಮಕ ಜವಾಬ್ದಾರಿಗಳನ್ನು ಒಳಗೊಂಡಿದ್ದು, ರಾಜ್ಯ ಸರ್ಕಾರ ಮತ್ತು ಸಂವಿಧಾನಾತ್ಮಕ ವ್ಯವಸ್ಥೆಯ ನಡುವೆ ಮಹತ್ವದ ಪಾತ್ರ ವಹಿಸುತ್ತದೆ. ಶಾಸನಸಭೆಯ ಅಧಿವೇಶನ, ಮಸೂದೆಗಳಿಗೆ ಸಂಬಂಧಿಸಿದ ಸಂವಿಧಾನಾತ್ಮಕ ಪ್ರಕ್ರಿಯೆಗಳು ಹಾಗೂ ಇತರ ಅಧಿಕೃತ ಕರ್ತವ್ಯಗಳಲ್ಲಿ ರಾಜ್ಯಪಾಲರ ಪಾತ್ರ ಪ್ರಮುಖವಾಗಿದೆ.

ಬಿಜೆಪಿಯ ಸಂಘಟನೆಯಲ್ಲಿ ದೀರ್ಘಕಾಲ ಸೇವೆ ಸಲ್ಲಿಸಿರುವ ಸುಧಾ ಯಾದವ್ ಅವರು ಇದೀಗ ರಾಜ್ಯಪಾಲೆಯಾಗಿ ಕರ್ನಾಟಕದ ಜವಾಬ್ದಾರಿ ವಹಿಸಿಕೊಳ್ಳಲಿದ್ದಾರೆ. ರಾಜಕೀಯ ಅನುಭವ ಮತ್ತು ಆಡಳಿತಾತ್ಮಕ ಸಂವಿಧಾನಾತ್ಮಕ ಹೊಣೆಗಾರಿಕೆಗಳ ನಡುವಿನ ಅವರ ಮುಂದಿನ ಕಾರ್ಯನಿರ್ವಹಣೆ ರಾಜ್ಯದ ರಾಜಕೀಯ ವಲಯದ ಗಮನ ಸೆಳೆಯಲಿದೆ.

### ರಾಜಭವನದಲ್ಲಿ ಹೊಸ ಅಧ್ಯಾಯ

ಹರಿಯಾಣದ ಗ್ರಾಮೀಣ ಹಿನ್ನೆಲೆಯಿಂದ ಬಂದ ಸುಧಾ ಯಾದವ್ ಅವರು ಉನ್ನತ ಶಿಕ್ಷಣ, ಕಾರ್ಗಿಲ್ ಯುದ್ಧದಲ್ಲಿ ಪತಿಯನ್ನು ಕಳೆದುಕೊಂಡ ವೈಯಕ್ತಿಕ ದುರಂತ, ಲೋಕಸಭಾ ಸದಸ್ಯತ್ವ ಹಾಗೂ ಬಿಜೆಪಿಯ ಪ್ರಮುಖ ಸಂಘಟನಾತ್ಮಕ ಹುದ್ದೆಗಳ ಮೂಲಕ ಸಾರ್ವಜನಿಕ ಜೀವನದಲ್ಲಿ ತಮದೇ ಆದ ಗುರುತನ್ನು ನಿರ್ಮಿಸಿಕೊಂಡಿದ್ದಾರೆ.

ಇದೀಗ ಕರ್ನಾಟಕದ ರಾಜ್ಯಪಾಲೆಯಾಗಿ ನೇಮಕಗೊಂಡಿರುವುದು ಅವರ ಸಾರ್ವಜನಿಕ ಜೀವನದ ಮತ್ತೊಂದು ಮಹತ್ವದ ಅಧ್ಯಾಯವಾಗಿದೆ. ಪ್ರಮಾಣವಚನ ಸ್ವೀಕಾರದೊಂದಿಗೆ ಅವರು ಅಧಿಕೃತವಾಗಿ ಅಧಿಕಾರ ವಹಿಸಿಕೊಂಡ ಬಳಿಕ, ಕರ್ನಾಟಕದ ಸಂವಿಧಾನಾತ್ಮಕ ವ್ಯವಸ್ಥೆಯಲ್ಲಿ ತಮ ಹೊಸ ಜವಾಬ್ದಾರಿಯನ್ನು ನಿರ್ವಹಿಸಲಿದ್ದಾರೆ.

## ಮೈಸೂರು ದಸರಾದಲ್ಲಿ ಕಂಬಳ, ತುಳುನಾಡಿನ ಸ್ತಬ್ಧಚಿತ್ರ: ಡಿಕೆಶಿ



ದಕ್ಷಿಣ ಕನ್ನಡ ಹಾಗೂ ಉಡುಪಿ ಜಿಲ್ಲಾ ಪ್ರವಾಸ ಕೈಗೊಳ್ಳಲು ಗುರುವಾರ ಮಂಗಳೂರಿಗೆ ಆಗಮಿಸಿದ ಸಿಎಂ ಡಿ.ಕೆ. ಶಿವಕುಮಾರ್ ಮಂಗಳೂರು ವಿಮಾನ ನಿಲ್ದಾಣದಲ್ಲಿ ಗೌರವ ರಕ್ಷೆಯೊಂದಿಗೆ ಸ್ವಾಗತಿಸಲಾಯಿತು. ದಕ್ಷಿಣ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವ ಯು.ಟಿ. ಖಾದರ್ ಮತ್ತಿತರರು ಉಪಸ್ಥಿತರಿದ್ದರು.

● ವಿಕ್ರಮ ವಾಹಿನಿ । ಮಂಗಳೂರು

ಈ ಬಾರಿಯ ಮೈಸೂರು ದಸರಾದಲ್ಲಿ ಕರಾವಳಿಯ ಕಂಬಳ ಮತ್ತು ತುಳುನಾಡಿನ ಸ್ತಬ್ಧಚಿತ್ರ ಪ್ರಮುಖ ಆಕರ್ಷಣೆಗಳಾಗಲಿವೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದರು.

ಮಂಗಳೂರು ವಿಮಾನ ನಿಲ್ದಾಣದಲ್ಲಿ ಗುರುವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೈಸೂರು ದಸರಾವನ್ನು ರಾಜ್ಯದ ನಾಡಹಬ್ಬವಾಗಿ ಸರ್ಕಾರ ವಿಜೃಂಭಣೆಯಿಂದ ಆಚರಿಸುತ್ತಿದೆ. ಅ.21ರ ವಿಜಯದಶಮಿ ಕಾರ್ಯಕ್ರಮದಲ್ಲಿ ತುಳುನಾಡಿನ ಪ್ರತಿನಿಧಿಗಳೂ ಭಾಗವಹಿಸಲಿದ್ದಾರೆ. ಈ ಬಾರಿ ಹಲವು ಹೊಸ ಕಾರ್ಯಕ್ರಮಗಳನ್ನು ಪರಿಚಯಿಸಲಾಗಿದ್ದು, ಪಥಸಂಚಲನದಲ್ಲಿ ಸೇನಾಪಡೆಗಳ ತಂಡಗಳು ಪಾಲ್ಗೊಳ್ಳಲಿವೆ ಎಂದರು.

"ಕಂಬಳವನ್ನು ಮೈಸೂರಿಗೆ ಕೊಂಡೊಯ್ಯುವುದಾಗಿ ಈ ಹಿಂದೆ ಹೇಳಿದ್ದೆ. ವಿಜಯನಗರ ಕಾಲದಲ್ಲಿ ದಸರಾ ಸಂದರ್ಭದಲ್ಲಿ ಕೋಣಗಳನ್ನು ಕರೆತರುತ್ತಿದ್ದ ಇತಿಹಾಸವೂ ಇದೆ. ದಸರಾ ಎಲ್ಲರ ಹಬ್ಬ, ಇದು ರಾಜ್ಯದ ಹಬ್ಬ" ಎಂದು ಹೇಳಿದರು.

ಕುದ್ರೋಳಿ ಕ್ಷೇತ್ರಕ್ಕೆ ಭೇಟಿ ನೀಡುವಂತೆ ಹಿರಿಯ ಕಾಂಗ್ರೆಸ್ ನಾಯಕ ಜನಾರ್ದನ ಪೂಜಾರಿ ಅವರು ಹಲವು ವರ್ಷಗಳಿಂದ ಆಹ್ವಾನ ನೀಡುತ್ತಿದ್ದರು. ಕಳೆದ ವರ್ಷವೂ ಭೇಟಿ ನೀಡಿದ್ದೆ.

ನವರಾತ್ರಿ ಆಚರಣೆಗಳು ವಿವಿಧ ಸಮಾಜಗಳು ಮತ್ತು ಸಮುದಾಯಗಳನ್ನು ಒಗ್ಗೂಡಿಸುವುದರ ಜತೆಗೆ ಕರಾವಳಿಯ ಸಾಂಸ್ಕೃತಿಕ ವೈಭವವನ್ನು ಪ್ರತಿಬಿಂಬಿಸುತ್ತಿವೆ ಎಂದು ತಿಳಿಸಿದರು.

**ಎಸ್‌ಐಆರ್ ವಿರುದ್ಧ ಹೋರಾಟ ಮುಂದುವರಿಕೆ**

ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಕುರಿತು ಮಾತನಾಡಿದ ಶಿವಕುಮಾರ್, ಎಸ್‌ಐಆರ್ ದತ್ತಾಂಶಕ್ಕೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಲಾಗಿದೆ.

ಮತದಾನದ ಹಕ್ಕು ಮಹತ್ವದ್ದಾಗಿದ್ದು, ಅದನ್ನು ಸಂರಕ್ಷಿಸಲು ಹೋರಾಟ ಮುಂದುವರಿಸಲಾಗುವುದು ಎಂದರು.

ಎಸ್‌ಐಆರ್ ವಿರುದ್ಧದ ಪ್ರತಿಭಟನಾ ಮೆರವಣಿಗೆಯ ವೇಳೆ ರಾಹುಲ್ ಗಾಂಧಿ ಅವರು ತಮ್ಮನ್ನು ವಾಹನದಲ್ಲಿ ಬರುವಂತೆ ಕರೆದಿದ್ದ ವಿಚಾರವನ್ನು ಬಿಜೆಪಿ ನಾಯಕರು ರಾಜಕೀಯ ಲಾಭಕ್ಕಾಗಿ ಅಪಪ್ರಚಾರ ಮಾಡಿದ್ದಾರೆ ಎಂದು ಆರೋಪಿಸಿದರು.

"ನನ್ನನ್ನು ರಾಜ್ಯದ ಉಪಮುಖ್ಯಮಂತ್ರಿಯನ್ನಾಗಿ ಮಾಡುವಲ್ಲಿ ಮಲ್ಲಿಕಾರ್ಜುನ ಖರ್ಗೆ ಮತ್ತು ರಾಹುಲ್ ಗಾಂಧಿ ಅವರ ಸಹಕಾರವಿದೆ. ಅವರ ಬೆಂಬಲದಿಂದಲೇ ರಾಜ್ಯದಲ್ಲಿ ಮತದಾರರ ಹಕ್ಕುಗಳ ರಕ್ಷಣೆಗೆ ಹೋರಾಡುತ್ತಿದ್ದೇವೆ. ರಾಹುಲ್ ಗಾಂಧಿ ಮಾನವೀಯತೆ ಹೊಂದಿರುವ ನಾಯಕ. ಇಂತಹ ಸಣ್ಣ ವಿಚಾರಗಳನ್ನು ರಾಜಕೀಯಕ್ಕೆ ಬಳಸಿಕೊಳ್ಳಬಾರದು" ಎಂದು ಹೇಳಿದರು.

ಸ್ಟಿಂಗ್ ಆಪರೇಷನ್ ಪ್ರಕರಣದಲ್ಲಿ ನಡೆದ ಬಂಧನಗಳ ಕುರಿತು ಕೇಳಿದ ಪ್ರಶ್ನೆಗೆ, "ಈ ಬಗ್ಗೆ ನನಗೆ ಮಾಹಿತಿ ಇಲ್ಲ" ಎಂದು ಪ್ರತಿಕ್ರಿಯಿಸಿದರು.

## ನ.1ರಿಂದ ಮೊಬೈಲ್ ಕರೆಗಳಲ್ಲಿ ಅಧಿಕೃತ ಹೆಸರು ಪ್ರದರ್ಶನ ಕಡ್ಡಾಯ?

● ವಿಕ್ರಮ ವಾಹಿನಿ । ನವದೆಹಲಿ

ಅಜ್ಞಾತ ಕರೆಗಳು ಮತ್ತು ಸ್ಪ್ಯಾಮ್ ಮೂಲಕ ನಡೆಯುವ ವಂಚನೆಗಳಿಗೆ ಕಡಿವಾಣ ಹಾಕುವ ಉದ್ದೇಶದಿಂದ, ಕರೆ ಮಾಡುವವರ ಅಧಿಕೃತ ಹೆಸರನ್ನು ಮೊಬೈಲ್ ಪರದೆಯ ಮೇಲೆ ಪ್ರದರ್ಶಿಸುವ 'ಕಾಲಿಂಗ್ ನೇಮ್ ಪ್ರೆಸೆಂಟೇಶನ್' (ಸಿಎನ್‌ಎಪಿ) ವ್ಯವಸ್ಥೆಯನ್ನು 2026ರ ನವೆಂಬರ್ 1ರಿಂದ ಕಡ್ಡಾಯಗೊಳಿಸಲು ದೂರಸಂಪರ್ಕ ಇಲಾಖೆ (ಡಿಒಟಿ) ನಿರ್ದೇಶನ ನೀಡಿದೆ ಎಂದು ವರದಿಯಾಗಿದೆ.

ಈ ವ್ಯವಸ್ಥೆಯಡಿ, ಮೊಬೈಲ್‌ನಲ್ಲಿ ಕರೆ ಮಾಡುವವರ ಸಂಖ್ಯೆ ಈಗಾಗಲೇ ಉಳಿಸಿದ್ದರೆ ಸಂಪರ್ಕದಲ್ಲಿರುವ ಹೆಸರೇ ಕಾಣಿಸುತ್ತದೆ. ಸಂಖ್ಯೆ ಉಳಿಸಿರದಿದ್ದರೆ, ಸಿಮ್ ಪಡೆಯುವಾಗ ಕೆವೈಸಿ ದಾಖಲೆಗಳಲ್ಲಿ ನೀಡಿರುವ ನೋಂದಾಯಿತ ಹೆಸರನ್ನು ದೂರಸಂಪರ್ಕ ಕಂಪನಿಗಳ ದತ್ತಾಂಶದಿಂದ ಪಡೆದು ಪ್ರದರ್ಶಿಸಲಾಗುತ್ತದೆ. ಇದರಿಂದ ನಕಲಿ ಗುರುತಿನ ಮೂಲಕ ಕರೆ ಮಾಡಿ ವಂಚಿಸುವ ಪ್ರಕರಣಗಳನ್ನು ತಡೆಯಲು ನೆರವಾಗುವ ನಿರೀಕ್ಷೆಯಿದೆ. ಸದ್ಯ 4ಜಿ ಮತ್ತು 5ಜಿ ಸೇರಿದಂತೆ ಉನ್ನತ ತಲೆಮಾರಿನ ನೆಟ್‌ವರ್ಕ್‌ಗಳಲ್ಲಿ ಈ ವ್ಯವಸ್ಥೆ ಜಾರಿಗೊಳಿಸುವ ಉದ್ದೇಶವಿದೆ. 2ಜಿ ಮತ್ತು 3ಜಿ ನೆಟ್‌ವರ್ಕ್‌ಗಳಲ್ಲಿ ಅನುಷ್ಠಾನದ ಕುರಿತು ಮುಂದಿನ ದಿನಗಳಲ್ಲಿ ಪರಿಶೀಲನೆ ನಡೆಸಲಾಗುತ್ತದೆ ಎಂದು ವರದಿಯಾಗಿದೆ.

ಕರೆ ಮಾಡುವವರ ಅಧಿಕೃತ ಹೆಸರನ್ನು ದೃಢೀಕರಿಸಲು ಸಾಧ್ಯವಾಗದ ಅಂತಾರಾಷ್ಟ್ರೀಯ ಕರೆಗಳಿಗೆ 'ಅಂತಾರಾಷ್ಟ್ರೀಯ ಕರೆ' ಎಂಬ ಸೂಚನೆ ಪ್ರದರ್ಶಿಸುವ ವ್ಯವಸ್ಥೆ ಇರಲಿದೆ. ವ್ಯಾಪಾರ ಉದ್ದೇಶದ ಸಂಪರ್ಕಗಳನ್ನು ಹೊಂದಿರುವ ಸಂಸ್ಥೆಗಳು ತಮ್ಮ ವೈಯಕ್ತಿಕ ಹೆಸರಿನ ಬದಲು ಜಿಎಸ್‌ಟಿ ಪೋರ್ಟಲ್‌ನಲ್ಲಿ ನೋಂದಾಯಿಸಿರುವ ವ್ಯಾಪಾರದ ಹೆಸರನ್ನು ಪ್ರದರ್ಶಿಸಲು ಅವಕಾಶ ಕಲ್ಪಿಸುವ ಪ್ರಸ್ತಾವವೂ ಇದೆ. ಸಿಎನ್‌ಎಪಿ ವ್ಯವಸ್ಥೆಯಿಂದ ಕರೆ ಮಾಡುವವರ ಗುರುತು ತಿಳಿಯಲು ಅನುಕೂಲವಾಗಲಿದ್ದು, ಸ್ಪ್ಯಾಮ್ ಕರೆಗಳನ್ನು ಗುರುತಿಸುವಲ್ಲಿ ಮೊಬೈಲ್ ಬಳಕೆದಾರರಿಗೆ ನೆರವಾಗುವ ನಿರೀಕ್ಷೆಯಿದೆ.

## ಬಂಡೀಪುರದ ಕಾಡುಹಂದಿಗಳಿಗೆ ಆಫ್ರಿಕನ್ ಸ್ವೈನ್ ಫೀವರ್

● ವಿಕ್ರಮ ವಾಹಿನಿ । ಗುಂಡ್ಲುಪೇಟೆ

ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ಕಾಡುಹಂದಿಗಳಲ್ಲಿ ಆಫ್ರಿಕನ್ ಸ್ವೈನ್ ಫೀವರ್ (ಎಎಸ್‌ಎಫ್) ಸೋಂಕು ದೃಢಪಟ್ಟಿದ್ದು, ಕಳೆದ ಎರಡು ದಿನಗಳಲ್ಲಿ ಎರಡು ಕಾಡುಹಂದಿಗಳು ಮೃತಪಟ್ಟಿವೆ. ಇದರಿಂದ ಕಾಡಂಚಿನ ಗ್ರಾಮಗಳ ನಿವಾಸಿಗಳಲ್ಲಿ ಆತಂಕ ಉಂಟಾಗಿದೆ.

ಮದ್ದೂರು ವಲಯದ ಬಳಿಕ ಗೋಪಾಲಸ್ವಾಮಿಬೆಟ್ಟ ಹಾಗೂ ಕುಂದಕೆರೆ ವಲಯಗಳ ಕಾಡಂಚಿನ ಬೂರದಾರಹುಂಡಿ, ಮಂಗಲ, ಜಕ್ಕಹಳ್ಳಿ ಮತ್ತು ಕಣಿಯನಪುರ ಪ್ರದೇಶಗಳಲ್ಲಿ ಕಾಡುಹಂದಿಗಳು ರಕ್ತವಾಂತಿ ಮಾಡಿಕೊಂಡು ಮೃತಪಟ್ಟಿದ್ದವು. ಮೃತಪಟ್ಟ ಹಂದಿಯ ಮರಣೋತ್ತರ ಪರೀಕ್ಷೆಯ ವರದಿಯಲ್ಲಿ ಆಫ್ರಿಕನ್ ಸ್ವೈನ್ ಫೀವರ್ ಸೋಂಕು ದೃಢಪಟ್ಟಿದೆ ಎಂದು ಜಿ.ಎಸ್. ಬೆಟ್ಟ ವಲಯ ಅರಣ್ಯಾಧಿಕಾರಿ ಕೆ.ಪಿ. ಸತೀಶ್ ಕುಮಾರ್ ತಿಳಿಸಿದ್ದಾರೆ.

ರೆಸಾರ್ಟ್‌ಗಳು ಮತ್ತು ಹೋಂಸ್ಟೇಗಳಲ್ಲಿ ಉತ್ಪತ್ತಿಯಾಗುವ ತ್ಯಾಜ್ಯವನ್ನು ಸಮರ್ಪಕವಾಗಿ ವಿಲೇವಾರಿ ಮಾಡುವಂತೆ ಸೂಚಿಸಲಾಗಿದೆ. ತ್ಯಾಜ್ಯ ತಿನ್ನಲು ಕಾಡುಹಂದಿಗಳು ಗುಂಪಾಗಿ ಬರುವುದರಿಂದ ಸೋಂಕು ಹರಡುವ ಅಪಾಯವಿದೆ ಎಂದು ಅರಣ್ಯ ಇಲಾಖೆ ಎಚ್ಚರಿಸಿದೆ. ಪಶುಸಂಗೋಪನಾ ಇಲಾಖೆಯ ಉಪನಿರ್ದೇಶಕ ಡಾ. ಮಂಜುನಾಥ್ ಅವರ ಪ್ರಕಾರ, ಈ ಸೋಂಕು ಕಾಡುಹಂದಿಗಳಿಂದ ಸಾಕುಹಂದಿಗಳಿಗೆ ಹರಡಬಹುದು. ಆದರೆ ನಾಯಿಗಳು ಸೇರಿದಂತೆ ಇತರ ಪ್ರಾಣಿಗಳಿಗೆ ಅಥವಾ ಮನುಷ್ಯರಿಗೆ ಹರಡುವುದಿಲ್ಲ. ಜಿಲ್ಲೆಯ ಸಾಕುಹಂದಿಗಳಿಗೆ ಈಗಾಗಲೇ ಚುಚ್ಚುಮದ್ದು ನೀಡಲಾಗಿದೆ ಎಂದು ಅವರು ತಿಳಿಸಿದ್ದಾರೆ.

## ಮಲ್ಯ ಸಾಲ ಇತ್ಯರ್ಥಕ್ಕೆ ಐಷಾರಾಮಿ ಜೀವನವೇ ಅಡ್ಡಿ: ಹೈಕೋರ್ಟ್

● ವಿಕ್ರಮ ವಾಹಿನಿ । ಬೆಂಗಳೂರು

ಕಿಂಗ್‌ಫಿಷರ್ ಏರ್‌ಲೈನ್ಸ್‌ಗೆ ಸಂಬಂಧಿಸಿದ ಸಾಲ ವಸೂಲಾತಿ ಪ್ರಕ್ರಿಯೆ ಅಂತಿಮಗೊಳ್ಳಲು ಉದ್ಯಮಿ ವಿಜಯ್ ಮಲ್ಯ ಅವರ ಐಷಾರಾಮಿ ಜೀವನಶೈಲಿ, ಅತಿಯಾದ ವೈಯಕ್ತಿಕ ಭೋಗ ಮತ್ತು ಪ್ರತಿಷ್ಠೆಯ ವ್ಯಾಮೋಹ ಅಡ್ಡಿಯಾಗಿರುವಂತೆ ಕಾಣುತ್ತಿದೆ ಎಂದು ಕರ್ನಾಟಕ ಹೈಕೋರ್ಟ್ ಅಭಿಪ್ರಾಯಪಟ್ಟಿದೆ.

ನ್ಯಾಯಮೂರ್ತಿಗಳಾದ ಡಿ.ಕೆ. ಸಿಂಗ್ ಮತ್ತು ಟಿ.ಎಂ. ನದಾಫ್ ಅವರ ವಿಭಾಗೀಯ ಪೀಠವು ಯುನೈಟೆಡ್ ಬ್ರೆವರೀಸ್ ಲಿಮಿಟೆಡ್‌ನಲ್ಲಿನ ಮಲ್ಯ ಅವರ ಷೇರುಗಳ ಮೇಲಿನ ಹಕ್ಕು ಪ್ರತಿಪಾದನೆಗೆ ಸಂಬಂಧಿಸಿದ ಪ್ರಕರಣದಲ್ಲಿ ಈ ಅಭಿಪ್ರಾಯ ವ್ಯಕ್ತಪಡಿಸಿದೆ. ಈ ಷೇರುಗಳ ಮೇಲಿನ ಹಕ್ಕಿನಲ್ಲಿ ಡಿಯಾಗಿಯೋ ಹೋಲ್ಡಿಂಗ್ಸ್ ನೆದರ್‌ಲ್ಯಾಂಡ್ಸ್ ಬಿ.ವಿ.ಗೆ ಬ್ಯಾಂಕ್‌ಗಳಿಗಿಂತ ಹೆಚ್ಚಿನ ಆದ್ಯತೆ ನೀಡಿದೆ.

ಕಿಂಗ್‌ಫಿಷರ್ ಏರ್‌ಲೈನ್ಸ್‌ಗೆ ನೀಡಿದ್ದ 6,203 ಕೋಟಿ ಸಾಲಕ್ಕೆ ಪ್ರತಿಯಾಗಿ ಬ್ಯಾಂಕ್‌ಗಳ ಒಕ್ಕೂಟ ಈಗಾಗಲೇ 14,131.6 ಕೋಟಿ ಮೌಲ್ಯದ ಆಸ್ತಿಗಳನ್ನು ವಸೂಲಿ ಮಾಡಿದೆ. ಹೀಗಿರುವಾಗ



ಯುನೈಟೆಡ್ ಬ್ರೆವರೀಸ್‌ನ ಷೇರುಗಳ ಮೇಲೂ ಹಕ್ಕು ಪ್ರತಿಪಾದಿಸಲು ಬ್ಯಾಂಕ್‌ಗಳಿಗೆ ಸಮರ್ಥನೆ ಇಲ್ಲ ಎಂದು ನ್ಯಾಯಪೀಠ ಹೇಳಿದೆ.

**ಭೋಗವಿಲಾಸದಿಂದ ಉದ್ಯಮ ಸಾಮ್ರಾಜ್ಯ ಪತನ**

ಮದ್ಯದ ಉದ್ಯಮದಲ್ಲಿ ಯಶಸ್ಸು ಗಳಿಸಿ 'ಕಿಂಗ್ ಆಫ್ ಗುಡ್ ಟೈಮ್ಸ್' ಎಂದೇ ಪ್ರಸಿದ್ಧರಾಗಿದ್ದ ವಿಜಯ್ ಮಲ್ಯ ಅವರ ಐಷಾರಾಮಿ ಜೀವನಶೈಲಿಯೇ ಅವರ ಬ್ರ್ಯಾಂಡ್‌ನ ಗುರುತಾಗಿತ್ತು. ಆದರೆ ವೈಯಕ್ತಿಕ ಪ್ರತಿಷ್ಠೆ, ಅಹಂಕಾರ ಮತ್ತು ದುಂದುವೆಚ್ಚಕ್ಕೆ ಆದ್ಯತೆ ನೀಡಿದ್ದು ಅವರ ಉದ್ಯಮ ಸಾಮ್ರಾಜ್ಯದ ಪತನಕ್ಕೆ ಕಾರಣವಾಯಿತು ಎಂದು ನ್ಯಾಯಾಲಯ ಅಭಿಪ್ರಾಯಪಟ್ಟಿದೆ.

ದಶಕಗಳ ಪರಿಶ್ರಮದಿಂದ ಕಟ್ಟಿದ ಉದ್ಯಮ ಸಾಮ್ರಾಜ್ಯವನ್ನು ಅತಿಯಾದ ಭೋಗವಿಲಾಸದಿಂದ ಕೆಲವೇ ವರ್ಷಗಳಲ್ಲಿ ನಾಶಪಡಿಸಬಹುದು ಎಂಬುದಕ್ಕೆ ಮಲ್ಯ ಅವರ ಪ್ರಕರಣ ಉದಾಹರಣೆಯಾಗಿದೆ ಎಂದು ಪೀಠ ಹೇಳಿದೆ. ಸಾಲ ವಸೂಲಾತಿ ಪ್ರಕ್ರಿಯೆಗೆ ಅಂತಿಮ ತೆರೆ ಎಳೆಯುವ ವಿಚಾರ ಬ್ಯಾಂಕ್‌ಗಳ ಒಕ್ಕೂಟ ಮತ್ತು ಕೇಂದ್ರ ಸರ್ಕಾರಕ್ಕೆ ಬಿಟ್ಟದ್ದು ಎಂದೂ ನ್ಯಾಯಾಲಯ ಸ್ಪಷ್ಟಪಡಿಸಿದೆ.

ಇದೇ ವೇಳೆ, ಸಾಲ ವಸೂಲಾತಿ ಪ್ರಕ್ರಿಯೆಯಲ್ಲಿ ಈಗಾಗಲೇ ವಸೂಲಾಗಿರುವ ಮೊತ್ತ ಮತ್ತು ಬಾಕಿ ಹಕ್ಕುಗಳ ನಡುವಿನ ಸಂಬಂಧವನ್ನು ಪರಿಗಣಿಸುವ ಅಗತ್ಯವಿದೆ ಎಂದು ನ್ಯಾಯಪೀಠದ ಅಭಿಪ್ರಾಯದಿಂದ ಸ್ಪಷ್ಟವಾಗುತ್ತದೆ. ಪ್ರಕರಣದ ಅಂತಿಮ ನಿರ್ಧಾರವು ಬ್ಯಾಂಕ್‌ಗಳ ಒಕ್ಕೂಟದ ಮುಂದಿನ ಕ್ರಮ ಹಾಗೂ ಕೇಂದ್ರ ಸರ್ಕಾರದ ನಿಲುವಿನ ಮೇಲೆ ಅವಲಂಬಿತವಾಗಿದ್ದು, ಮಲ್ಯ ಅವರ ಆಸ್ತಿಗಳ ಮೇಲಿನ ಹಕ್ಕುಗಳ ಕುರಿತ ಕಾನೂನು ಪ್ರಕ್ರಿಯೆಯೂ ಮಹತ್ವ ಪಡೆದುಕೊಂಡಿದೆ.

### ವಿವಾದದ ಹಿನ್ನೆಲೆ

ಮಲ್ಯ ಅವರ ವಿದೇಶಿ ಕಂಪನಿ ವ್ಯಾಟ್ಸನ್ ಲಿಮಿಟೆಡ್‌ಗೆ ಸ್ಟ್ಯಾಂಡರ್ಡ್ ಚಾರ್ಟರ್ಡ್ ಬ್ಯಾಂಕ್ 2013ರಲ್ಲಿ 135 ಮಿಲಿಯನ್ ಡಾಲರ್ ಸಾಲ ನೀಡಿತ್ತು. ಇದಕ್ಕೆ ಯುನೈಟೆಡ್ ಬ್ರೆವರೀಸ್‌ನ ಷೇರುಗಳನ್ನು ಅಡಮಾನ ಇಡಲಾಗಿತ್ತು. ವ್ಯಾಟ್ಸನ್ ಸಾಲ ಮರುಪಾವತಿಸಲು ವಿಫಲವಾದ ಹಿನ್ನೆಲೆಯಲ್ಲಿ, 2016ರಲ್ಲಿ ಡಿಯಾಗಿಯೋ ಬ್ಯಾಂಕ್‌ಗೆ ಹಣ ಪಾವತಿಸಿ ಸಾಲದ ಮೇಲಿನ ಹಕ್ಕು ಪ್ರತಿಪಾದಿಸಿತ್ತು. ಇನ್ನೊಂದೆಡೆ, ಕಿಂಗ್ ಫಿಷರ್ ಏರ್‌ಲೈನ್ಸ್‌ನ 6,203 ಕೋಟಿ ಸಾಲ ವಸೂಲಾತಿಗಾಗಿ ಈ ಷೇರುಗಳನ್ನು ಬಳಸಿಕೊಳ್ಳುವ ಹಕ್ಕು ತಮಗಿದೆ ಎಂದು ಬ್ಯಾಂಕ್‌ಗಳ ಒಕ್ಕೂಟ ವಾದಿಸಿತ್ತು. ಈ ವಿವಾದದ ವಿಚಾರಣೆ ನಡೆಸಿದ ಹೈಕೋರ್ಟ್, ಷೇರುಗಳ ಮೇಲಿನ ಹಕ್ಕಿನಲ್ಲಿ ಡಿಯಾಗಿಯೋಗೆ ಆದ್ಯತೆ ನೀಡಿದೆ.

## ಮಗುವಿನ ಬೆರಳು ಕತ್ತರಿಸಿದ ಪ್ರಕರಣ: ಎಫ್‌ಐಆರ್ ರದ್ದತಿಗೆ ಹೈಕೋರ್ಟ್ ನಕಾರ

● ವಿಕ್ರಮ ವಾಹಿನಿ । ಬೆಂಗಳೂರು

ಆರು ತಿಂಗಳ ಹೆಣ್ಣು ಮಗುವಿನ ಕೈಯಿಂದ ಡ್ರಿಪ್ ತೆಗೆಯುವಾಗ ಕಿರುಬೆರಳು ಕತ್ತರಿಸಿದ ಆರೋಪಕ್ಕೆ ಸಂಬಂಧಿಸಿದಂತೆ, ಬೆಂಗಳೂರಿನ ಇಂದಿರಾನಗರದ ಖಾಸಗಿ ಆಸ್ಪತ್ರೆಯ ವೈದ್ಯರು ಹಾಗೂ ಆಡಳಿತ ಮಂಡಳಿ ವಿರುದ್ಧ ದಾಖಲಾಗಿರುವ ಎಫ್‌ಐಆರ್ ರದ್ದುಗೊಳಿಸಲು ಹೈಕೋರ್ಟ್ ನಿರಾಕರಿಸಿದೆ.

ನ್ಯಾಯಮೂರ್ತಿ ಅನಂತ ರಾಮನಾಥ ಹೆಗಡೆ ಅವರಿದ್ದ ಏಕಸದಸ್ಯ ಪೀಠ, ಘಟನೆಯ ಬಳಿಕ ಮಗುವನ್ನು ಸುಮಾರು ನಾಲ್ಕು ಗಂಟೆಗಳ ಕಾಲ ತುರ್ತು ಚಿಕಿತ್ಸಾ ವಿಭಾಗದಲ್ಲಿರಿಸಲಾಗಿತ್ತು. ಈ ಅವಧಿಯಲ್ಲಿ ಏನು ನಡೆಯಿತು, ಅಗತ್ಯ ವೈದ್ಯಕೀಯ ಶಿಷ್ಟಾಚಾರ ಪಾಲಿಸಲಾಗಿತ್ತೇ ಎಂಬುದನ್ನು ತನಿಖೆ ಮೂಲಕ ತಿಳಿಯಬೇಕಿದೆ ಎಂದು ಹೇಳಿತು.

ವೈದ್ಯರು ಅಗತ್ಯ ಮುನ್ನೆಚ್ಚರಿಕೆ ವಹಿಸದಿದ್ದರೆ ಅಥವಾ ನಿಗದಿತ ವೈದ್ಯಕೀಯ ಕ್ರಮಗಳನ್ನು ಅನುಸರಿಸದಿದ್ದರೆ ನಿರ್ಲಕ್ಷ್ಯವಾಗಬಹುದು. ಆದರೆ, ಎಲ್ಲ ಕ್ರಮಗಳನ್ನು ಪಾಲಿಸಿದ್ದರೆ ಅದನ್ನು ನಿರ್ಲಕ್ಷ್ಯವೆಂದು ಪರಿಗಣಿಸಲಾಗದು. ಹೀಗಾಗಿ ತನಿಖಾಧಿಕಾರಿಗಳು ವೈದ್ಯಕೀಯ ತಜ್ಞರ ನೆರವು ಪಡೆದು, ವಸ್ತುನಿಷ್ಠ ವರದಿ ಸಲ್ಲಿಸಬೇಕು ಎಂದು ಸೂಚಿಸಿದ ನ್ಯಾಯಪೀಠ, ಎಫ್‌ಐಆರ್ ರದ್ದುಗೊಳಿಸುವ ಅರ್ಜಿಯನ್ನು ತಿರಸ್ಕರಿಸಿತು.

**ಆಸ್ಪತ್ರೆ ಮತ್ತು ಪೋಷಕರ ವಾದವೇನು?:** ಘಟನೆ ನಡೆದಾಗ ಸಂಬಂಧಪಟ್ಟ ವೈದ್ಯರು ಸ್ಥಳದಲ್ಲಿರಲಿಲ್ಲ. ಮಕ್ಕಳ ತಜ್ಞರಾಗಿರುವ ಅವರಿಗೆ ಇಂತಹ ಶಸ್ತ್ರಚಿಕಿತ್ಸೆ ನಡೆಸುವ ಪರಿಣತಿ ಇರಲಿಲ್ಲ. ಬಳಿಕ ತಜ್ಞ ಶಸ್ತ್ರಚಿಕಿತ್ಸಕರನ್ನು ಕರೆಸಿ ಚಿಕಿತ್ಸೆ ನೀಡಲಾಗಿದೆ. ಘಟನೆಗೆ ಕಾರಣವಾದ ನರ್ಸ್‌ರನ್ನು ಅಮಾನತುಗೊಳಿಸಿ ಆಂತರಿಕ ವಿಚಾರಣೆ ನಡೆಸಲಾಗುತ್ತಿದೆ ಎಂದು ಆಸ್ಪತ್ರೆ ಪರ ವಕೀಲರು ವಾದಿಸಿದರು.

ಇದಕ್ಕೆ ಪ್ರತಿಯಾಗಿ, ನರ್ಸ್ ಘಟನೆ ಬಗ್ಗೆ ತಕ್ಷಣ ಮಾಹಿತಿ ನೀಡಿದ್ದರೂ ನಾಲ್ಕು ಗಂಟೆಗಳ ಕಾಲ ಶಸ್ತ್ರಚಿಕಿತ್ಸೆ ನಡೆಸಲಿಲ್ಲ.

ತಜ್ಞರನ್ನು ತಕ್ಷಣ ಕರೆಸುವ ಅಥವಾ ಮಗುವನ್ನು ಉನ್ನತ ಚಿಕಿತ್ಸಾ ಸೌಲಭ್ಯವಿರುವ ಆಸ್ಪತ್ರೆಗೆ ಕರೆದೊಯ್ಯುವ ಕ್ರಮ ಕೈಗೊಂಡಿಲ್ಲ ಎಂದು ಪೋಷಕರ ಪರ ವಕೀಲರು ಆರೋಪಿಸಿದರು.

**ಪ್ರಕರಣದ ಹಿನ್ನೆಲೆ:** ಅನಾರೋಗ್ಯದ ಕಾರಣ ಮಗುವನ್ನು ಆಸ್ಪತ್ರೆಗೆ ದಾಖಲಿಸಿ ಡ್ರಿಪ್ ಹಾಕಲಾಗಿತ್ತು. ಆಸ್ಪತ್ರೆಯಿಂದ ಬಿಡುಗಡೆ ಮಾಡುವಂತೆ ವೈದ್ಯರು ಸೂಚಿಸಿದ ಬಳಿಕ ನರ್ಸ್ ಡ್ರಿಪ್ ತೆಗೆಯುವಾಗ ಮಗುವಿನ ಕಿರುಬೆರಳು ಕತ್ತರಿಸಿದೆ ಎನ್ನಲಾಗಿದೆ.

ಈ ಸಂಬಂಧ ಇಂದಿರಾನಗರ ಪೊಲೀಸ್ ಠಾಣೆಯಲ್ಲಿ ಭಾರತೀಯ ನ್ಯಾಯ ಸಂಹಿತೆಯ ಸೆಕ್ಷನ್ 125(ಬಿ) ಅಡಿಯಲ್ಲಿ ಪ್ರಕರಣ ದಾಖಲಾಗಿತ್ತು. ಎಫ್‌ಐಆರ್ ರದ್ದುಗೊಳಿಸುವಂತೆ ವೈದ್ಯರು ಮತ್ತು ಆಸ್ಪತ್ರೆ ಆಡಳಿತ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು.

## ಕಾರು-ಲಾರಿ ಮುಖಾಮುಖಿ ಡಿಕ್ಕಿ: ಗ್ರಾಮ ಆಡಳಿತಾಧಿಕಾರಿ ಸಾವು

● ವಿಕ್ರಮ ವಾಹಿನಿ । ಚಾಮರಾಜನಗರ

ಕಾರು ಮತ್ತು ಲಾರಿ ಮುಖಾಮುಖಿ ಡಿಕ್ಕಿಯಾಗಿ ಗ್ರಾಮ ಆಡಳಿತಾಧಿಕಾರಿ ಸ್ಥಳದಲ್ಲೇ ಮೃತಪಟ್ಟ ಘಟನೆ ಚಾಮರಾಜನಗರ ತಾಲೂಕಿನ ಮಂಗಲ-ಮಾದಾಪುರ ರಸ್ತೆಯಲ್ಲಿ ನಡೆದಿದೆ.

ಮೃತರನ್ನು ಚಾಮರಾಜನಗರ ನಿವಾಸಿ, ಯಳಂದೂರು ತಾಲೂಕಿನ ಯರಿಯೂರು ವೃತ್ತದ ಗ್ರಾಮ ಆಡಳಿತಾಧಿಕಾರಿ ಮಹೇಶ್ ಎಂದು ಗುರುತಿಸಲಾಗಿದೆ. ಕರ್ತವ್ಯ ನಿರ್ವಹಿಸಿ ಕಾರಿನಲ್ಲಿ ಚಾಮರಾಜನಗರಕ್ಕೆ ಬರುತ್ತಿದ್ದಾಗ ಲಾರಿ ಡಿಕ್ಕಿ ಹೊಡೆದಿದೆ. ಡಿಕ್ಕಿಯ ರಭಸಕ್ಕೆ ಕಾರು ಸಂಪೂರ್ಣ ನಜ್ಜುಗುಜ್ಜಾಗಿದ್ದು, ಮಹೇಶ್ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಸಂತೇಮರಹಳ್ಳಿ ಠಾಣೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ, ಮೃತದೇಹವನ್ನು ಮರಣೋತ್ತರ ಪರೀಕ್ಷೆಗೆ ರವಾನಿಸಿದ್ದಾರೆ. ಅಪಘಾತಕ್ಕೆ ಸಂಬಂಧಿಸಿದಂತೆ ಕಾರು ಮತ್ತು ಲಾರಿಯನ್ನು ವಶಕ್ಕೆ ಪಡೆದು ಮುಂದಿನ ಕ್ರಮ ಕೈಗೊಂಡಿದ್ದಾರೆ.

Vikrama Vahini Kannada Daily, #204, Forest Layout, Jnanabharathi, Bangalore-560095
PRGI NO: KARKAN/2018/78481 vikramavahini@gmail.com 93535 91145
Printed by B.N. Murali Prasad, Published by Swarna Latha B.N., and Printed at Swarna Graphics, Forest Layout, Jnanabharathi, Bangalore -560059 and Published at Bangalore, Editor: B.N. Murali Prasad., Volume:9, Issue : 190,